# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 52 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–08–2023 ಬುಧವಾರ | ಪುಟ: 4 | ಬೆಲೆ : ರೂ.2–00
Volume - 01 Issue - 52 | Title- Code: KARKAN 28269 | Chitradurga | Date: 30-08-2023 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪ್ರಾಮಾಣಿಕ ಸೇವೆ ಒದಗಿಸಿದಾಗ ಮಾತ್ರ ನಗರಸಭೆ ಮೇಲೆ ಜನರಿಗೆ ವಿಶ್ವಾಸ 2

ಸಮಗ್ರ ಕೃಷಿ ಪದ್ಧತಿಯಿಂದ ರೈತರಿಗೆ ಶಾಶ್ವತ ಆರ್ಥಿಕ ಭದ್ರತೆ: ಎನ್. ಚಲುವರಾಯಸ್ವಾಮಿ 3

ಹೆಚ್ಚುವರಿ ಬ್ಯಾರೇಜ್ ನಿರ್ಮಿಸಲು ಸಚಿವರಿಗೆ ಮನವಿ ಮಾಡಿದ ಶಾಸಕ ಟಿ.ರಘುಮೂರ್ತಿ 4


## ಫಾಸ್ಟ್ ನ್ಯೂಸ್

### ಮಡಿವಾಳ ಮಾಚಿದೇವ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳ ಆಹ್ವಾನ

» **ಹೊಸದುರ್ಗ**

ತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ವತಿಯಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿಗಳನ್ನ ಕರೆಯಲಾಗಿದ್ದು 2022–23 ನೇ ಸಾಲಿನಲ್ಲಿ ತೇರ್ಗಡೆ ಹೊಂದಿದ ಎಸ್.ಎಸ್.ಎಲ್.ಸಿ,ಪ್ರಥಮ ಪಿಯುಸಿ,ದ್ವಿತೀಯ ಪಿ.ಯು.ಸಿ, ಐಟಿಐ, ಪ್ರಥಮ, ದ್ವಿತೀಯ ಹಾಗೂ ತೃತೀಯ ಪದವಿ ಮತ್ತು ಮಾಸ್ಟರ್ ಡಿಗ್ರಿಯಲ್ಲಿ ತೇರ್ಗಡೆ ಹೊಂದಿರುವ ಹೊಸದುರ್ಗ ತಾಲೂಕಿನ ಎಲ್ಲಾ ವಿದ್ಯಾರ್ಥಿಗಳು ಸಹಾ ಪ್ರತಿಭಾ ಪುರಸ್ಕಾರಕ್ಕೆ ಅರ್ಹರಾಗಿರುತ್ತಾರೆ ಎಂದು ಸಂಘದ ಕಾರ್ಯದರ್ಶಿ ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪ್ರತಿಭಾ ಪುರಸ್ಕಾರಕ್ಕೆ ಭಾಗವಹಿಸುವವರು 2022–23 ನೇ ಸಾಲಿನಲ್ಲಿ ಪಾಸಾದ ಅಂಕಪಟ್ಟಿ ಇತ್ತೀಚಿನ ಎರಡು ಭಾವಚಿತ್ರ, ಸಂಪೂರ್ಣ ವಿಳಾಸ ಹಾಗೂ ಮೊಬೈಲ್ ನಂಬರ್ ಒಳಗೊಂಡಂತೆ ಅರ್ಜಿಗಳನ್ನು ಸೆ.2 ರಂದು ಒಳಗೆ ದಾಖಲಾತಿಗಳನ್ನು ಸಲ್ಲಿಸಬೇಕು ಎಂದು ತಿಳಿಸಿರುವ ಅವರು ಹೆಚ್ಚಿನ ಮಾಹಿತಿಗೆ ರಾಮಕೃಷ್ಣಪ್ಪ ಅಧ್ಯಕ್ಷರು ಮೋ:944822248, ರಮೇಶ್ ಕಾರ್ಯದರ್ಶಿ ಮೋ:7337828386 ಸಂಪರ್ಕಿಸಬಹುದು.

### ಇಂದು ವಿಶೇಷ ಹುಣ್ಣಿಮೆ: ಬ್ಲೂ ಮೂನ್

ಇಂದು ಚಂದ್ರ ಭೂಮಿಗೆ ತುಂಬಾ ಸಮೀಪ ಬರಲಿದ್ದು, ಈಗಿರುವ ಚಂದ್ರನ 14 ರಷ್ಟು ಗಾತ್ರದಲ್ಲಿ ಹೆಚ್ಚು ಕಾಣಲಿದ್ದು, 32 ರಷ್ಟು ಭಾರೀ ಪ್ರಮಾಣದಲ್ಲಿ ಪ್ರಕಾಶಮಾನವಾಗಿ ಹೊಳೆಯಲಿದೆ. ಈ ರೀತಿಯ ಚಂದ್ರ 2009 ರಲ್ಲಿ ಕಂಡು ಬಂದಿತ್ತು. ಮತ್ತೆ ಈ ರೀತಿಯ ದೊಡ್ಡ ಹಾಗೂ ಪ್ರಕಾಶಮಾನವಾದ ಚಂದ್ರನನ್ನು ನೋಡಲು 2032 ರವರೆಗೂ ಕಾಯಬೇಕು.

ಕೃಷಿ ಸಂವಾದ ಕಾರ್ಯಕ್ರಮದಲ್ಲಿ ಕೃಷಿ ಸಚಿವ ಚಲುವರಾಯಸ್ವಾಮಿ ಭರವಸೆ

# ನಮ್ಮದು ರೈತ ಪರ ಸರ್ಕಾರ: ಆತಂಕ ಬೇಡ

» **ಚಿತ್ರದುರ್ಗ**





ನಾನು ರೈತರ ಕುಟುಂಬದ ಹಿನ್ನಲೆಯಿಂದ ಬಂದವನು, ರೈತರ ಸಮಸ್ಯೆ ಅರಿತಿದ್ದೇನೆ. ರಾಜ್ಯದ 31 ಜಿಲ್ಲೆಗಳಲ್ಲಿ ಅತ್ಯಂತ ಕಡಿಮೆ ಮಳೆ ಬೀಳುವ ಜಿಲ್ಲೆ ಚಿತ್ರದುರ್ಗ. ಜಿಲ್ಲೆಯ ನಾಲ್ಕು ತಾಲ್ಲೂಕುಗಳ ಬರ ಪರಿಸ್ಥಿತಿಯ ವಸ್ತು ಸ್ಥಿತಿ ವರದಿ ಸಿದ್ದವಾಗಿದ್ದು, ಇನ್ನೂ ಎರಡು ತಾಲ್ಲೂಕುಗಳ ವಾಸ್ತವ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಲಾಗಿದೆ, ಸೆಪ್ಟೆಂಬರ್ ಮೊದಲ ವಾರದಲ್ಲಿ ಬರಪೀಡಿತ ತಾಲ್ಲೂಕುಗಳ ಘೋಷಣೆ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು. ರೈತರು ಯಾರು ಆತಂಕ ಪಡಬೇಡಿ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ರೈತರಿಗೆ ಭರವಸೆ ನೀಡಿದರು. ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ಕೃಷಿ ತಜ್ಞರು, ಪ್ರಗತಿಪರ ಕೃಷಿಕರು, ಕೃಷಿ ಸಾಧಕರು ಹಾಗೂ ರೈತರೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯಸರ್ಕಾರರೈತರಆಶೀರ್ವಾದದಿಂದ ರಚನೆಯಾಗಿದ್ದು, ಸರ್ಕಾರ ರೈತರ ಪರವಿದೆ. ರೈತರು ಸಲ್ಲಿಸಿರುವ ಮನವಿ, ಸಲಹೆಗಳನ್ನು ಪೂರ್ಣ ಪ್ರಮಾಣದಲ್ಲಿ ಅಧ್ಯಯನ ಮಾಡಿ, ಸಮಸ್ಯೆಯನ್ನು ಸಂಪೂರ್ಣ ವಿಮರ್ಶೆ ಮಾಡಿ, ಶೇ.100ರಷ್ಟು ಸಮಸ್ಯೆಗೆ ಪರಿಹಾರ ಒದಗಿಸುವ ಕೆಲಸ ಮಾಡಲಾಗುವುದು ಎಂದು ಹೇಳಿದರು. ಬೆಳೆವಿಮೆ ನೋಂದಣಿಗಾಗಿ ರೈತರು ರೂ.1265 ಕೋಟಿ ಹಣ ಪಾವತಿಸಿ ಬೆಳೆ ವಿಮಾ ಕಂತು ಹಣ ಪಾವತಿಸಿದ್ದಾರೆ. ರೂ.8661 ಕೋಟಿ ಹಣ ರೈತರಿಗೆ ಮರುಪಾವತಿಯಾಗಿದೆ. ಹೀಗಾಗಿ ಒಟ್ಟು 7396 ಕೋಟಿ ರೂ. ಹಣ ಬೆಳೆವಿಮೆಯಿಂದ ಸಿಕ್ಕಿದಂತಾಗಿದೆ. ಬೆಳೆವಿಮೆಯ ಮಾನದಂಡಗಳ ಕುರಿತು ಕೇಂದ್ರ ಮತ್ತು ರಾಜ್ಯ ಸರ್ಕಾರ ಮತ್ತು ವಿಮಾ ಕಂಪನಿಗಳ ಜೊತೆ ಚರ್ಚಿಸಿ ಸರಿಪಡಿಸುವ ಕೆಲಸ ಮಾಡಲಾಗುವುದು. ಜಿಲ್ಲಾಮಟ್ಟದ ಸಮಸ್ಯೆಗಳನ್ನು ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ಜಿಲ್ಲೆಯ ಶಾಸಕರು ಬಗೆಹರಿಸಲಿದ್ದಾರೆ ಎಂದರು.

ರಾಜ್ಯ ಸರ್ಕಾರವು ಆಗಸ್ಟ್ 1 ರಿಂದ ರೂ.3 ಲಕ್ಷದಿಂದ 5 ಲಕ್ಷದವರೆಗೆ ಶೂನ್ಯ ಬಡ್ಡಿದರಲ್ಲಿ ಸಾಲಸೌಲಭ್ಯ ನೀಡುತ್ತಿದ್ದು, ರೂ.15 ಲಕ್ಷದವರೆಗೂ ಶೇ.3ರ ಬಡ್ಡಿದರದಲ್ಲಿ ಸಾಲಸೌಲಭ್ಯ ನೀಡಲಾಗುತ್ತಿದೆ ಎಂದರು. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ರಾತ್ರಿಯ ಬದಲು ಹಗಲು ವೇಳೆಯಲ್ಲಿ ವಿದ್ಯುತ್ ಸರಬರಾಜು ಪೂರೈಕೆ ಮಾಡುವ ಕುರಿತು ನಿರ್ಧಾರ ಕೈಗೊಳ್ಳಲಾಗುವುದು.

ಗೃಹ ಲಕ್ಷ್ಮೀ ಯೋಜನೆಗೆ ಆ. 30 ರಂದು ಚಾಲನೆ ನೀಡಲಾಗುತ್ತಿದೆ. ರಾಜ್ಯದ 01. 10 ಕೋಟಿ ಕುಟುಂಬಗಳು ಯೋಜನೆಯ ಫಲಾನುಭವಿಗಳಾಗಿದ್ದಾರೆ. ನೊಂದಣಿ ಮಾಡಿಕೊಂಡಿರುವ ಪ್ರತಿ ಕುಟುಂಬದ ಮನೆಯ ಯಜಮಾನಿಗೆ ಆ.30ರಂದು ರೂ.2000 ಹಣ ಜಮೆ ಮಾಡಲಾಗುತ್ತದೆ. ರೈತರ ಸಾಲಮನ್ನ ಮಾಡಿದ್ದರೂ ಕೂಡ ರೂ.10 ಸಾವಿರ ಕೋಟಿ ವ್ಯಯ ಮಾಡಲಾಗುತ್ತಿತ್ತು. ಆದರೆ ಗೃಹಲಕ್ಷ್ಮೀ ಯೋಜನೆಗೆ ರೂ.32 ಸಾವಿರ ಕೋಟಿ ಹಣವನ್ನು ಕುಟುಂಬಗಳಿಗೆ ಪಾವತಿಸಲಾಗುತ್ತಿದೆ ಎಂದರು.

ರೈತರ ಬೇಡಿಕೆಗಳು: ಜಿಲ್ಲೆ ಸಂಪೂರ್ಣ ಬರಗಾಲಕ್ಕೆ ತುತ್ತಾಗಿದ್ದು, ಕೂಡಲೇ ರೈತರಿಗೆ ಬೆಳೆವಿಮೆ ಹಾಗೂ ಪರಿಹಾರವನ್ನು ರೈತರ ಖಾತೆಗೆ ಹಾಕಬೇಕು. ಪರಿಹಾರ ಮೊತ್ತ ಹೆಕ್ಟೇರ್‌ಗೆ ರೂ.25000/– ಗಳಿಗೆ ಹೆಚ್ಚಿಸಬೇಕು. ಜಾನುವಾರುಗಳಿಗೆ ಗೋಶಾಲೆ ತೆರೆಯಬೇಕು. ರೈತರ ಎಲ್ಲಾ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು. ಈಚೆಗೆ ರೈತರು ಸಾವಯವ ಕೃಷಿಗೆ ಒಲವು ತೋರುತ್ತಿದ್ದು, ಹೇರಳವಾಗಿ ಸಾವಯವ ಗೊಬ್ಬರ, ಔಷಧಿಗಳು ಪರ್ಟಿಲೈಜರ್ ಅಂಗಡಿಗಳಲ್ಲಿ ಸಿಗಬೇಕು. ಕೃಷಿ ಇಲಾಖೆಯಿಂದ ಸೆಣಬು ಬೀಜ ವಿತರಿಸಬೇಕು. ರೈತರು ಖರೀದಿಸುವ ಉಪಕರಣಗಳಿಗೆ ಜಿಎಸ್‌ಟಿ ವಿಧಿಸಬಾರದು. ಪ್ರಸಕ್ತ ವರ್ಷದಿಂದ ಪಿವಿಸಿ ಪೈಪ್ ವಿತರಿಸಬೇಕು. ಎಲ್ಲಾ ಸಾಮಾನ್ಯ ವರ್ಗದ ರೈತರಿಗೂ ಸ್ಪ್ರಿಂಕ್ಲರ್ ಸೆಟ್ ವಿತರಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಚಿತ್ರದುರ್ಗ ತಾಲ್ಲೂಕು ಘಟಕದಿಂದ ಕೃಷಿ ಸಚಿವರಿಗೆ ಮನವಿ ಮಾಡಲಾಯಿತು.

ಸಿರಿಧಾನ್ಯಗಳ ಪ್ರೋತ್ಸಾಹಧನ ಹೆಚ್ಚಳಕ್ಕೆ ಒತ್ತಾಯ: ಪ್ರಸ್ತುತ ರೈತ ಸಿರಿ ಯೋಜನೆಯಡಿ ಸಿರಿಧಾನ್ಯ ಬೆಳೆಯುವ ರೈತರಿಗೆ ನೀಡಲಾಗುತ್ತಿರುವ ಪ್ರೋತ್ಸಾಹಧನವನ್ನು ಹೆಕ್ಟೇರ್‌ಗೆ 10,000/– ರೂಗಳಿಂದ 20,000/–ರೂಗಳಿಗೆ ಹೆಚ್ಚಿಸಬೇಕು. ಕೊಬ್ಬರಿ ಖರೀದಿ ಕೇಂದ್ರವನ್ನು ಮರು ಸ್ಥಾಪಿಸಬೇಕು. ಬೆಂಬಲ ಬೆಲೆಯಡಿ ರಾಗಿ ಖರೀದಿಯಲ್ಲಿ ನಡೆದ ಹಗರಣದ ಬಗ್ಗೆ ಶೀಘ್ರ ತನಿಖೆ ನಡೆಸಿ ರೈತರ ಖಾತೆಗೆ ಹಣ ಜಮಾ ಮಾಡಬೇಕು. ಕೃಷಿ ಉಪಕರಣಗಳನ್ನು ಸಬ್ಸಿಡಿ ದರದಲ್ಲಿ ಒದಗಿಸಬೇಕು ಎಂದು ಹೊಸದುರ್ಗ ತಾಲ್ಲೂಕು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೃಷಿ ಸಚಿವರಿಗೆ ಒತ್ತಾಯಿಸಿದರು.

ಆಂದ್ರ ಮಾದರಿ ಬೆಳೆವಿಮೆ ಜಾರಿ ತರಲಿ: ಆಂದ್ರ ಪ್ರದೇಶದ ಮಾದರಿಯಲ್ಲಿ ಬೆಳೆವಿಮೆ ಯೋಜನೆ ರಾಜ್ಯದಲ್ಲಿ ಜಾರಿಗೆ ತರಬೇಕು ಎಂದು ರೈತ ಮುಖಂಡ ಕೆ.ಪಿ.ಭೂತಯ್ಯ ಮನವಿ ಮಾಡಿದರು.ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆಯ ಮಾನದಂಡಗಳು ಅವೈಜ್ಞಾನಿಕವಾಗಿವೆ. ಜುಲೈ 31 ಬೆಳೆವಿಮೆ ಪಾವತಿಸಲು ಕೊನೆಯ ದಿನ ಎಂದು ವ್ಯಾಪಕ ಪ್ರಚಾರ ಮಾಡಿ ಬೆಳೆ ಕಟ್ಟಿಸಿಕೊಳ್ಳಲಾಗುತ್ತದೆ. ನಾವು ಸಾಲ ಮಾಡಿ ಬೆಳೆವಿಮೆ ಕಟ್ಟುತ್ತೇವೆ. ಆದರೆ ರೈತರಿಗೆ ಬೆಳೆವಿಮೆ ಪಾವತಿಸಲು ಯಾವುದೇ ದಿನಾಂಕ ನಿಗಧಿಪಡಿಸುವುದಿಲ್ಲ. 7 ವರ್ಷಗಳ ಸರಾಸರಿ ಗಣನೆಗೆ ತೆಗೆದಕೊಂಡು ಬೆಳೆವಿಮೆ ಪಾವತಿಮಾಡಲಾಗುತ್ತಿದೆ. ಇದನ್ನು ಆಯಾ ವರ್ಷವೇ ಗಣನೆಗೆ ತೆಗೆದುಕೊಳ್ಳಬೇಕು. ಆಂದ್ರ ಪ್ರದೇಶದ ಮಾದರಿ ಬೆಳೆವಿಮೆ ಜಾರಿಗೆ ತರಬೇಕು ಎಂದು ಕೃಷಿ ಸಚಿವರಿಗೆ ಮನವಿ ಮಾಡಿದರು.

ವಿ.ವಿ.ಸಾಗರ ಹಿನ್ನೀರಿನ ಪ್ರದೇಶದ ರೈತರಿಗೆ ಅನುಕೂಲ ಕಲ್ಪಿಸಬೇಕು: ಹೊಸದುರ್ಗ ತಾಲ್ಲೂಕಿನ ಲಕ್ಕಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮೂರು–ನಾಲ್ಕು ಹಳ್ಳಿಗಳು ವಿ.ವಿ.ಸಾಗರ ಹಿನ್ನೀರಿನಲ್ಲಿ ಮುಳುಗಿವೆ. ವರ್ಷದಿಂದ ಈ ಭಾಗದ ರೈತರಿಗೆ ಅನುಕೂಲ ಕಲ್ಪಿಸಿಲ್ಲ. ನಿಜವಾದ ಭೂರಹಿತ ರೈತರಿಗೆ ಬದುಕಲು ಅವಕಾಶ ನೀಡಬೇಕು. 40 ರಿಂದ 50 ವರ್ಷಗಳ ಕಾಲ ಸಾಗುವಳಿ ಮಾಡುತ್ತಿರುವ ರೈತರಿಗೆ ಸಾಗುವಳಿ ಪತ್ರ ನೀಡಬೇಕು ಎಂದು ರೈತ ಮುಖಂಡ ಈಚಘಟ್ಟ ಸಿದ್ಧವೀರಪ್ಪ ಕೃಷಿ ಸಚಿವರಿಗೆ ಒತ್ತಾಯಿಸಿದರು.

ಪುಟ ↘ 2

ವಿಶ್ವವಿಖ್ಯಾತ ನಾಡಹಬ್ಬ ದಸರಾಗೆ ಇನ್ನೆರಡು ತಿಂಗಳು ಬಾಕಿ

# ಈ ಬಾರಿ ದಸರಾ ಹಂಸಲೇಖ ಉದ್ಘಾಟನೆ

## ಚಾಮುಂಡಿ ಬೆಟ್ಟಕ್ಕೆ ತೆರಳಿ ಪೂಜೆ ಸಲ್ಲಿಸಿಸ ಸಿಎಂ ಮತ್ತು ಡಿಸಿಎಂ

» **ಮೈಸೂರು**



ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವಕ್ಕೆ ಇನ್ನೆರಡು ತಿಂಗಳು ಬಾಕಿ ಇದೆ. ಹೀಗಿರುವಾಗ ಸಿಎಂ ಸಿದ್ದರಾಮಯ್ಯನವರು ದಸರಾ ಉದ್ಘಾಟಕರ ಹೆಸರು ಘೋಷಿಸಿದ್ದಾರೆ. ಸಂಗೀತ ನಿರ್ದೇಶಕ ಹಂಸಲೇಖ ಅವರಿಂದ 2023ರ ಮೈಸೂರು ದಸರಾ ಉದ್ಘಾಟನೆ ಮಾಡಲಿದ್ದಾರೆ ಎಂದು ಹೇಳಿದ್ದಾರೆ.

ಸರ್ಕಾರ 100 ದಿನ ಪೂರೈಸಿದ ಹಿನ್ನೆಲೆ ಚಾಮುಂಡಿ ಬೆಟ್ಟಕ್ಕೆ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ ಶಿವಕುಮಾರ್ ಭೇಟಿ ನೀಡಿದ್ದಾರೆ. ಒಂದೇ ಕಾರಿನಲ್ಲಿ ಇಬ್ಬರು ನಾಯಕರು ಹರಕೆ ತೀರಿಸಲು ಬಂದಿದ್ದಾರೆ.

ಸಿಎಂ ಸಿದ್ದರಾಮಯ್ಯ ಅವರ ಕಾರಿನಲ್ಲಿ ಡಿ.ಕೆ.ಶಿ ಜೊತೆಗೆ ಲಕ್ಷ್ಮಿ ಹೆಬ್ಬಾಳ್ಕರ್ ಕೂಡ ಚಾಮುಂಡಿ ಬೆಟ್ಟಕ್ಕೆ ಬಂದಿಳಿದಿದ್ದಾರೆ. ಶತದಿನವನ್ನು ಕಾಂಗ್ರೆಸ್ ಸರ್ಕಾರ ಪೂರೈಸಿದ ಹಿನ್ನಲೆ ಚಾಮುಂಡಿ ದೇವಿಗೆ ಪೂಜೆ ಸಲ್ಲಿಸಿದ್ದಾರೆ.

# ಭದ್ರಾ ಯೋಜನೆ ಕೃಷಿಕರ ಪಾಲಿಗೆ ವರದಾನ

» **ಹೊಸದುರ್ಗ**



ಭದ್ರಾ ಮೇಲ್ದಂಡೆ ಯೋಜನೆ ಅತ್ಯಂತ ಮಹತ್ವದ ಯೋಜನೆಯಾಗಿದೆ.ಈಯೋಜನೆಯುಕೃಷಿಕರ ಪಾಲಿಗೆ ವರದಾನವಾಗಲಿದ್ದು, ಇದರಿಂದಾಗಿ ರೈತರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ತಿಳಿಸಿದರು.

ಅಜ್ಜಂಪುರ ಮತ್ತು ಕಡೂರು ವೈ ಜಂಕ್ಷನ್ ಸ್ಥಳಕ್ಕೆ ಕಡೂರು ಶಾಸಕ ಆನಂದ್ ಮತ್ತು ಭದ್ರಾ ಮೇಲ್ದಂಡೆ ಯೋಜನೆಗೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಮಂಗಳವಾರ ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ ಭೇಟಿ ನೀಡಿ ಪ್ರಗತಿಯಲ್ಲಿರುವ ಕಾಮಗಾರಿಯನ್ನು ವೀಕ್ಷಣೆ ಮಾಡಿ, ಪ್ರಗತಿ ಕಾರ್ಯದ ಕುರಿತಂತೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು.

ಕಾಮಗಾರಿಯ ಸ್ಥಳಕ್ಕೆ ಭೇಟಿ ನೀಡಿದ ಬಳಿಕ ಮಾತನಾಡಿದ ಶಾಸಕರು, ಭದ್ರ ಮೇಲ್ದಂಡೆ ಯೋಜನೆಯ ತುಮಕೂರು ನಾಲೆಯ ಪ್ರಗತಿಕಾರ್ಯ ಕಡೂರು ಸಮೀಪದಲ್ಲಿ ವಿಳಂಬವಾಗುತ್ತಿದ್ದರಿಂದ ಸ್ಥಳೀಯ ಶಾಸಕರು ಹಾಗೂ ಅಧಿಕಾರಿಗಳೊಂದಿಗೆ ಭೇಟಿ ನೀಡಿ, ಕಾಮಗಾರಿ ವೀಕ್ಷಣೆ ಮಾಡಲಾಗಿದೆ. ಈ ಕಾಮಗಾರಿಯೂ ಬೇಗನೇ ಪೂರ್ಣಗೊಳ್ಳುವ ವಿಶ್ವಾಸವಿದ್ದು, ಆದಷ್ಟು ಬೇಗ ಈ ಯೋಜನೆ ರೈತರ ಪಾಲಿಗೆ ವರದಾನವಾಗಲಿದೆ ಎಂದು ಹೇಳಿದರು.






## ಪ್ರಮುಖ ಸುದ್ದಿ

# ಮುಂಗಾರು ಮಳೆ ವೈಫಲ್ಯ: ನೊಂದ ರೈತರಿಂದ ಶೇಂಗಾ ಬೆಳೆ ನಾಶ

## ಲಕ್ಷಾಂತರ ರೂ ಹಣ ಖರ್ಚು ಮಾಡಿದ್ದು, ಕೈಬಾರದ ಬೆಳೆ: ಸರ್ಕಾರ ಸಹಾಯದತ್ತ ರೈತರ ಚಿತ್ತ

» **ಚಳ್ಳಕೆರೆ**



ತಾಲ್ಲೂಕಿನ ಕೆಲವು ಭಾಗದಲ್ಲಿ ರೈತರು ಮಳೆಬಾರದ ಹಿನ್ನೆಲೆಯಲ್ಲಿ ತಮ್ಮ ಜಮೀನಿನಲ್ಲಿ ಬಿತ್ತಿದ ಶೇಂಗಾ ಬೆಳೆ ಒಣಗುತ್ತಿರುವುದುನ್ನು ನೋಡಲಾರದೆ ಸಂಕಟದಿಂದ ಬೆಳೆಯನ್ನು ಟ್ರ್ಯಾಕ್ಟರ್ ಮೂಲಕ ನಾಶ ಪಡಿಸುವ ಕಾರ್ಯಕ್ಕೆ ಮುಂದಾಗಿದ್ದಾರೆ.

ಪ್ರಸ್ತುತ ಮುಂಗಾರು ಮಳೆಯೂ ಸಹ ಸಕಾಲಕ್ಕೆ ಬಾರದೆ ತಾಲ್ಲೂಕಿನಾದ್ಯಂತ ಸುಮಾರು 55 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಶೇಂಗಾ ಬಿತ್ತನೆಯಾಗಿದ್ದು, ಎಲ್ಲೆಡೆ ಶೇಂಗಾ ಬೆಳೆ ಒಣಗಿ ನೆಲಕಚ್ಚಿ ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಬಿತ್ತನೆ ಮಾಡಿದ್ದ ರೈತನಿಗೆ ಈಗ ಬಿಡಿಗಾಸು ಸಿಗದೆ ಕಂಗಾಲಾಗಿದ್ದಾನೆ.

ಪುಟ ↘ 2

## ಫಾಸ್ಟ್ ನ್ಯೂಸ್

### ಮುಂಗಾರು ಮಳೆ ವೈಪಲ್ಯ: ನೊಂದ ರೈತರಿಂದ ಶೇಂಗಾ ಬೆಳೆ ನಾಶ

» ಮೊದಲ ಪುಟದಿಂದ

ಕಡೆಯ ಪಕ್ಷ ಜಾನುವಾರುಗಳಿಗೆ ಮೇವಾದರೂ ಆಗಲಿ ಎಂಬ ದೂರ ದೃಷ್ಠಿಯಿಂದ ಶೇಂಗಾ ಬೆಳೆ ಕೈಕೊಟ್ಟ ಕಾರಣ ತನ್ನ ಜಮೀನಿನ ಬೆಳೆಯನ್ನು ತಾನೇ ಸ್ವತಃ ಟ್ರ್ಯಾಕ್ಟರ್ ಮೂಲಕ ಬೇಸರದಿಂದಲೇ ನಾಶ ಪಡಿಸುತ್ತಿದ್ದಾನೆ. ತಾಲ್ಲೂಕಿನ ಕೋನಿಗರಹಳ್ಳಿ ಗ್ರಾಮದ ರೈತ ಜಯಣ್ಣ ತನ್ನ 10.50 ಎಕರೆ ಜಮೀನಿನಲ್ಲಿ ಸುಮಾರು ಒಂದು ಲಕ್ಷ ಹಣ ಖರ್ಚು ಮಾಡಿ ಶೇಂಗಾ ಬಿತ್ತನೆ ಮಾಡಿದ್ದು, ಮಳೆಯಾಗದ ಹಿನ್ನೆಲೆಯಲ್ಲಿ ಶೇಂಗಾ ಗಿಡಗಳು ದೃಢವಾದ ಕಾಯಿ ಕಟ್ಟದೆ ಗಿಡಗಳು ಒಣಗುವ ಹಂತ ತಲುಪಿತ್ತು. ಇದನ್ನು ಕಂಡ ರೈತ ಜಯಣ್ಣ ದನಕರುಗಳಿಗೆ ಮೇವಾದರೂ ಸಿಗಲಿ ಎಂದು ಉದ್ದೇಶದಿಂದ ಸೋಮವಾರ ಟ್ರ್ಯಾಕ್ಟರ್‌ನಿಂದ ಶೇಂಗಾವನ್ನು ನಾಶ ಪಡಿಸಿದ್ದಾನೆ. ಈ ಸಂದರ್ಭದಲ್ಲಿ ಪತ್ರಿಕೆಯೊಂದಿಗೆ ಮಾತನಾಡಿದ ನೊಂದ ರೈತ ಜಯಣ್ಣ, ಸರ್ಕಾರ ಈಗಲಾದರೂ ನಮ್ಮಂತಹ ಬಡ ರೈತರಿತೆ ಆರ್ಥಿಕ ನೆರವು ನೀಡಬೇಕು. ಒಂದು ಲಕ್ಷ ಹಣವನ್ನು ನಾನು ಸಾಲ ಮಾಡಿ ಬೆಳೆಗೆ ಹಾಕಿದ್ದೇನೆ. ಆದರೆ, ಈಗ ಹಾಕಿದ ಬಂಡವಾಳವೂ ಇಲ್ಲ ಶೇಂಗಾ ಬೆಳೆಯೂ ಇಲ್ಲ. ಹೀಗಾಗಿ ಸರ್ಕಾರ ಕೂಡಲೇ ರೈತರಿಗೆ ಸ್ಪಂದಿಸಿ ಆಗಿರುವ ನಷ್ಟವನ್ನು ಪೂರ್ಣಪ್ರಮಾಣದಲ್ಲಿ ನೀಡಲಿ ಎಂದು ಮನವಿ ಮಾಡಿದ್ದಾನೆ. ಅದರಂತೆ ಟಿ.ಎನ್.ಕೋಟೆ ಗ್ರಾಮದ ರೈತ ಆರ್.ಟಿ.ನಿಂಗಣ್ಣ ಸಹ ತನ್ನ 3 ಎಕರೆ ಹಾಗೂ ಸ್ನೇಹಿತ ಕೋರಿ ಜಮೀನಿನಲ್ಲಿ 3 ಎಕರೆ ಒಟ್ಟು 6 ಎಕರೆ ಪ್ರದೇಶದಲ್ಲಿ ಸುಮಾರು 80 ಸಾವಿರ ಖರ್ಚು ಮಾಡಿ ಶೇಂಗಾ ಬಿತ್ತನೆ ಮಾಡಿದ್ದ. ಪ್ರಾರಂಭದ ಹಂತದಲ್ಲಿ ಶೇಂಗಾ ಬೆಳೆ ಚನ್ನಾಗಿಯೇ ಇತ್ತು, ನಂತರ ಮಳೆಯಾಗದ ಹಿನ್ನೆಲೆಯಲ್ಲಿ ಶೇಂಗಾ ಗಿಡಗಳು ಬಾಡಲಾರಂಬಿಸಿದವು. ಜಮೀನನಲ್ಲಿ ಉಳಿದಿರುವ ಅಲ್ಪಸ್ವಲ್ಪದ ಶೇಂಗಾ ಬೆಳೆಯನ್ನು ಸಹ ರೈತ ಹಾನಿ ಮಾಡಿ ಸರ್ಕಾರ ಸ್ಪಂದಿಸಬೇಕೆಂದು ಮನವಿ ಮಾಡಿದ್ದಾನೆ.

### ವೀರಶೈವ ಸೌಹಾರ್ದ ಪತ್ತಿನ ಸಹಕಾರಿ ಸಂಘದ ಸರ್ವ ಸದಸ್ಯರ ಸಭೆ 31ರಂದು.

» ಚಳ್ಳಕೆರೆ

ವೀರಶೈವ ಸೌಹಾರ್ದ ಪತ್ತಿನ ಸಹಕಾರಿ ಸಂಘ ನಿಯಮಿತ ಇದರ ಪ್ರಸ್ತುತ ವರ್ಷದ ಸರ್ವ ಸದಸ್ಯರ ಸಭೆಹಾಗೂರಜತಮಹೋತ್ಸವಕಾರ್ಯಕ್ರಮವನ್ನು ಆಗಸ್ಟ್ 31ರ ಗುರುವಾರ ಬೆಳಗ್ಗೆ 11ಕ್ಕೆ ಅಧ್ಯಕ್ಷ ಎಸ್. ಜಯಪ್ರಕಾಶ್ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಸಂಘದ ನಿರ್ದೇಶಕ ಕೆ.ನಾಗೇಶ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿ, ವೀರಶೈವ ಸೌಹಾರ್ದ ಪತ್ತಿನ ಸಹಕಾರಿ ಸಂಘದ ರಜಯಮಹೋತ್ಸವ ಹಾಗೂ 26ನೇ ಸರ್ವ ಸದಸ್ಯರ ಸಭೆಗೆ ಎಲ್ಲಾ ನಿರ್ದೇಶಕರು, ಶೇರುದಾರರು ಹಾಗೂ ಸಹಕಾರಿ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಸಭೆಯನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಿದ್ದಾರೆ.

### ಆಗಸ್ಟ್ 30 ರಂದು ದಾವಣಗೆರೆ ಜಿಲ್ಲೆಯಾದ್ಯಂತ ಗೃಹಲಕ್ಷ್ಮಿಗೆ ಚಾಲನೆ

■ ದಾವಣಗೆರೆ

ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷೆ ಯೋಜನೆಯಾದ ಗೃಹಲಕ್ಷ್ಮಿ ಯೋಜನೆಗೆ ಆಗಸ್ಟ್ 30 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಹದಡಿ ರಸ್ತೆಯಲ್ಲಿರುವ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಸಮುದಾಯ ಭವನದಲ್ಲಿ ಜಿಲ್ಲಾ ಮಟ್ಟದಲ್ಲಿ ಚಾಲನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಏಕಕಾಲಕ್ಕೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ನಗರದ 11 ಕಡೆ ವಿವಿಧ ಸ್ಥಳಗಳಲ್ಲಿ ಹಾಗೂ ಜಗಳೂರು. ಹರಿಹರ, ಹೊನ್ನಾಳಿ ಮತ್ತು ಚನ್ನಗಿರಿ ತಾಲ್ಲೂಕುಗಳ ನಗರ ಸ್ಥಳೀಯ ಸಂಸ್ಥೆಗಳ ಸಹಯೋಗದಲ್ಲಿ ನಗರ ಪ್ರದೇಶಗಳ ವಾರ್ಡ್‌ಗಳಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲೆಯಲ್ಲಿ ಇಲ್ಲಿಯವರೆಗೆ 3,27,870 ಫಲಾನುಭವಿಗಳು ನೋಂದಣಿ ಮಾಡಿಕೊಂಡಿದ್ದು, ಒಟ್ಟು ಶೇ, 87.93 ರಷ್ಟು ನೋಂದಣಿ ಪೂರ್ಣಗೊಂಡಿರುತ್ತದೆ.

### ಎಲ್‌ಪಿಜಿ ಬಳಕೆದಾರರಿಗೆ ಗುಡ್‌ನ್ಯೂಸ್ ನೀಡಿದ ಕೇಂದ್ರ ಸರ್ಕಾರ

ಬೆಂಗಳೂರು: ಎಲ್‌ಪಿಜಿ ಬಳಕೆದಾರರಿಗೆ ಕೇಂದ್ರ ಸರ್ಕಾರ ಗುಡ್‌ನ್ಯೂಸ್ ನೀಡಿದ್ದು, ಪ್ರತಿ ಎಲ್‌ಪಿಜಿ ಸಿಲಿಂಡರ್ ದರ 200 ರೂ. ಇಳಿಸಿದೆ. ಜೊತೆಗೆ ಉಜ್ವಲ ಫಲಾನುಭವಿಗಳಿಗೆ ಪ್ರತಿ ಸಿಲಿಂಡರ್‌ಗೆ ಒಟ್ಟು 400 ರೂ. ಸಬ್ಸಿಡಿ ಕೊಟ್ಟಿದ್ದು, ಇತರ ಎಲ್ಲಾ ಎಲ್‌ಪಿಜಿ ಬಳಕೆದಾರರಿಗೆ 200 ರೂ. ರಿಯಾಯಿತಿ ನಿಗದಿ ಮಾಡಿದೆ.

# ಪ್ರಾಮಾಣಿಕ ಸೇವೆ ಒದಗಿಸಿದಾಗ ಮಾತ್ರ ನಗರಸಭೆ ಆಡಳಿತದ ಮೇಲೆ ಜನರಿಗೆ ವಿಶ್ವಾಸ

» ಚಳ್ಳಕೆರೆ

ನಗರಸಭೆಕಚೇರಿಆವಣದಲ್ಲಿಸೋಮವಾರ ಶಾಸಕ ಟಿ.ರಘುಮೂರ್ತಿಯವರ ಅಧ್ಯಕ್ಷತೆಯಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರು ನಗರಸಭೆ ಅಧಿಕಾರಿಗಳ ಮೇಲೆ ಆರೋಪದ ಸುರಿಮಳೆಗೈದರು.

ನಗರಸಭೆಯಲ್ಲಿ ಇ–ಸ್ವತ್ತು ಪಡೆಯಲು ಎರಡ್ಮೂರು ವರ್ಷಗಳ ಕಾಲ ಓಡಾಟ ನಡೆಸುತ್ತಿದ್ದೇವೆ ಎಂದು ನಿವೃತ್ತ ಪೊಲೀಸ್ ಅಧಿಕಾರಿ, ಗುತ್ತಿಗೆದಾರ ಜಗದೀಶ್ ಶಾಸಕರ ಗಮನ ಸೆಳೆದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ನೀವು ಜನರ ಕೆಲಸ ಮಾಡದೆ ಸರ್ಕಾರ, ಶಾಸಕರ ಮೇಲೆ ಆರೋಪ ಬರುತ್ತಿದೆ ಎಂದರು. ದಾಖಲೆಗಳನ್ನು ಕೈಯಲ್ಲಿ ಹಿಡಿದು ಟೇಬಲ್ ಟು ಟೇಬಲ್ ಸುತ್ತಾಡಬೇಕು, ಕೆಲವೊಮ್ಮೆ ಕಂದಾಯ ಕಟ್ಟಿದ್ದರೂ ರಿಜಿಸ್ಟರ್ ಪುಸ್ತಕದಲ್ಲಿ ಎಂಟ್ರಿಯಾಗುತ್ತಿಲ್ಲ, ಇ–ಸ್ವತ್ತು ಪಡೆಯಲು ಬಂದರೆ ಮತ್ತೆ ಎಲ್ಲಾ ಕಂದಾಯ ಕಟ್ಟಿ ಎಂದು ಹೇಳುತ್ತಾರೆ



ಎಂದು ನಾಗಭೂಣ, ಫರೀದ್, ನಾಗರತ್ನ ಮುಂತಾದವರು ಆರೋಪಿಸಿದರು. ಇದಕ್ಕೆ ಧ್ವನಿ ಗೂಡಿಸಿದ ನಗರಸಭಾ ಸದಸ್ಯರಾದ ಆರ್.ರುದ್ರನಾಯಕ, ಟಿ.ಮಲ್ಲಿಕಾರ್ಜುನ, ಒಂದೆ ದಿನದಲ್ಲಿ 50 ಇ–ಸ್ವತ್ತು ನೀಡುವ ಅಧಿಕಾರಿಗಳು ಸದಸ್ಯರಿಗೆ, ಸಾಮಾನ್ಯ ಜನರಿಗೆ ಮಾತ್ರ ಇಲ್ಲಸಲ್ಲದ ದಾಖಲೆ ಕೇಳಿ ಅಲೆದಾಡಿಸುತ್ತಾರೆ. ಸದಸ್ಯರಿಗೆ ಅಲೆದಾಡಿಸುವ ಇವರು ಸಾಮಾನ್ಯರ ಕೆಲಸ ಇನ್ನೇನು ಮಾಡುತ್ತಾರೆ ಎಂದು ಪ್ರಶ್ನಿಸಿದರು. ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಹಲವಾರು ಸಮಸ್ಯೆಗಳು ಇವೆ ಅವುಗಳನ್ನು 15 ದಿನಗಳಲ್ಲಿ ಬಗೆಹರಿಸಿ ಜನರಿಗೆ ವಿಶ್ವಾಸ ಮೂಡಿಸಿ. ಕಂದಾಯ ಇಲಾಖೆ ನೋಡಿಕೊಳ್ಳಲು ನಾಲ್ಕು ಅಧಿಕಾರಿಗಳಿದ್ದಾರೆ, ಅವರನ್ನು ನೋಡಿಕೊಳ್ಳಲು ಕಂದಾಯ ಅಧಿಕಾರಿ ಇದ್ದರೂಸಹಕೆಲಸಮಾತ್ರವಿಳಂಬವಾಗಲು ಕಾರಣ ಏನು ಎಂದು ಪರಿಶೀಲಿಸಿ ಎಂದು ಜಿಲ್ಲಾ ಯೋಜನಾಧಿಕಾರಿ ಮಹೇಂದ್ರ ಕುಮಾರ್,ಪೌರಾಯುಕ್ತ ಸಿ.ಚಂದ್ರಪ್ಪಗೆ ಸೂಚನೆ ನೀಡಿದರು. ಇದಕ್ಕೆ ಉತ್ತರಿಸಿದ ಅವರು, ಒಂದು ಬಾರಿ ದಾಖಲೆ ಸಲ್ಲಿಸಿ ಇ–ಸ್ವತ್ತು ಪಡೆದರೆ ಸಾಕು ಮತ್ತೆ, ಮತ್ತೆ ಕಚೇರಿಗೆ ಅಲೆಯುವ ಅಗತ್ಯವಿಲ್ಲ, ಇರುವ ಶುಲ್ಕ ಪಾವತಿಸಿ ನಿಮ್ಮ ಮೊಬೈಲ್ ನಲ್ಲೇ ಪಡೆಯಬಹುದು ಎಂದರು.

ಮೈರಾಡ ಕಾಲೋನಿಯ ಸುಮಾರು ಮಹಿಳೆಯರು ಶಾಸಕರಿಗೆ ಮನವಿ ಮಾಡಿ, ವಿದ್ಯುತ್ ಕಂಬ, ನಿವೇಶನ ನೀಡುವಂತೆ ಮನವಿ ಮಾಡಿದರು. ನಗರಸಭೆಯ ಅನುದಾನ ನೋಡಿಕೊಂಡು ಕಂಬಗಳನ್ನು ಹಾಕಿಕೊಂಡಿ ಎಂದು ಸೂಚಿಸಿದರು. ಕಾಲೋನಿಯ ಐದು ಕುಟುಂಬಕ್ಕೆ ಹಕ್ಕು ಪತ್ರ ನೀಡುವ ವಿಚಾರದಲ್ಲಿ ತಹಶೀಲ್ದಾರ್ ರೇಹಾನ್ ಪಾಷ ಇನ್ನೂ ಒಂದುವಾರದಲ್ಲಿ ನೀಡುವ ಭರವಸೆ ನೀಡಿದರು.

ನಗರಸಭಾ ಸದಸ್ಯರಾದ ಆರ್. ರುದ್ರನಾಯಕ, ಟಿ.ಮಲ್ಲಿಕಾರ್ಜುನ್, ಎಸ್.ಜಯಣ್ಣ, ಬಿ.ಟಿ.ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಜೈತುಂಬಿ, ಕೆ.ವೀರಭದ್ರಯ್ಯ, ಹೊಯ್ಸಳಗೋವಿಂದ ಮುಂತಾದವರು ಮಾತನಾಡಿ, ಒಬ್ಬ ವ್ಯಕ್ತಿಗೆ ಒಂದೇ ದಿನದಲ್ಲಿ 50ಕ್ಕೂ ಹೆಚ್ಚು ಇ–ಸ್ವತ್ತು ನೀಡಿದ್ದಾರೆ. ಆದರೆ, ನಮಗೆ ಏಕೆ ಇಲ್ಲ ಎಂದು ಆರೋಪಿಸಿದರು. ನಗರಸಭೆಯ ಎಲ್ಲಾ 31 ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ, ಚರಂಡಿ, ಲೈಟ್ ಹಾಗೂ ಸಮರ್ಪಕ ನೀರು ಸರಬರಾಜಿಗೆ ಕ್ರಮ ವಹಿಸಬೇಕು, ಎಇಇ ಕೆ.ವಿನಯ್, ಎಇಇ ನರೇಂದ್ರಬಾಬು, ಜೆಇ ಲೋಕೇಶ್, ಕಂದಾಯಾಧಿಕಾರಿ ರುಕ್ಮಿಣಿ, ಹಿರಿಯ ಆರೋಗ್ಯ ನಿರೀಕ್ಷಕ ಮಹಲಿಂಗಪ್ಪ, ಗೀತಕುಮಾರಿ, ದಾದಾಪೀರ್, ಗಣೇಶ್ ಮುಂತಾದವರಿಗೆ ತಮ್ಮ ಪಾಲಿನ ಕರ್ತವ್ಯವನ್ನುಸರಿಯಾಗಿ ನಿರ್ವಹಿಸುವಂತೆ ಸೂಚನೆ ನೀಡಿದರು. ಪೌರಕಾರ್ಮಿಕರಿಗೆ ನೇರವಾಗಿ ವೇತನ ಪಾವತಿಯಾಗುವಂತೆ ಮನವಿ ಅರ್ಪಿಸಿದರು.

## ವಿಶ್ವಬಂಧು ಸೊಸೈಟಿಗೆ 36,35740 ರೂ.ಲಾಭ

» ಚಿತ್ರದುರ್ಗ

ವಿಶ್ವಬಂಧು ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ 2022–23 ನೇ ಸಾಲಿಗೆ 36 ಲಕ್ಷದ 35 ಸಾವಿರದ 740 ರೂ.ಗಳ ಲಾಭದಲ್ಲಿದೆ ಎಂದು ಸೊಸೈಟಿ ಅಧ್ಯಕ್ಷ ಜಿ.ಬಿ.ತೀರ್ಥಪ್ಪ ತಿಳಿಸಿದರು.

ಎ.ಪಿ.ಎಂ.ಸಿ. ಕಚೇರಿ ಮುಂಭಾಗದಲ್ಲಿರುವ ದಲ್ಲಾಲರ ಭವನದಲ್ಲಿ ಭಾನುವಾರ ನಡೆದ ವಿಶ್ವಬಂಧು ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ 32 ನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಉದ್ಘಾಟಿಸಿ ಮಾತನಾಡಿದರು.

45.35 ಲಕ್ಷ ರೂ.ಷೇರು ಬಂಡವಾಳವಿದ್ದು, 1264 ಸದಸ್ಯರುಗಳನ್ನೊಳಗೊಂಡಿದೆ. 31–3–2023 ಕ್ಕೆ ಆಪದ್ಧನ ಮತ್ತು ಇತರೆ ನಿಧಿಗಳ ಬಾಬ್ತು 2.23 ಕೋಟಿ ರೂ.ಗಳಿದೆ. ಒಟ್ಟು ಠೇವಣಿ 3.94 ಕೋಟಿ ರೂ.ಗಳಿದ್ದು, ಅಲ್ಪ ಪ್ರಮಾಣದಲ್ಲಿ ಏರಿಕೆಯಾಗಿದೆ. ಷೇರುದಾರರಿಗೆ ರೂ.6.10 ಕೋಟಿ ಸಾಲ ನೀಡಿದ್ದು, ಸಾಲ ಪಡೆದವರು ಸಮಯಕ್ಕೆ ಸರಿಯಾಗಿ ಅಸಲು ಮತ್ತು ಬಡ್ಡಿಯನ್ನು ಪಾವತಿಸಿ ಸೊಸೈಟಿ ಅಭಿವೃದ್ದಿಗೆ ಕೈಜೋಡಿಸಬೇಕು. ಸಾಲ ತೆಗೆದುಕೊಂಡವರಿಗಿಂತಲೂ ಜಾಮೀನುದಾರರ ಮೇಲೆಯೂ ಜವಾಬ್ದಾರಿಯಿದೆ. ಜಾಮೀನು ಆಗುವುದಕ್ಕಿಂತ ಮುಂಚಿತವಾಗಿ ಸಾಲಗಾರರ ಆರ್ಥಿಕ ಸ್ಥಿತಿ, ವ್ಯವಹಾರ, ಸಾಲದ ಉದ್ದೇಶ, ಕಾಲ ಕಾಲಕ್ಕೆ ಸಾಲದ ಕಂತುಗಳನ್ನು ಮರುಪಾವತಿಸುವ ದೃಢತೆ ಬಗ್ಗೆ ಮಾಹಿತಿ ತಿಳಿದುಕೊಂಡಿರಬೇಕು



ಎಂದು ಸೂಚಿಸಿದರು. ಸದಸ್ಯರು ಠೇವಣಿಯಿಡಲು ಅವಕಾಶವಿದ್ದು, ಎಲ್ಲಾ ಸದಸ್ಯರುಗಳಿಗೆ ಒಂದು ಲಕ್ಷ ರೂ.ವರೆಗೆ ಅಪಘಾತ ವಿಮ ಪಾಲಿಸಿಯಡಿ ಒಳಪಡಿಸಲಾಗಿದೆ.ಸೊಸೈಟಿಯು ಎರಡು ಸುಸಜ್ಜಿತ ಕಟ್ಟಡಗಳನ್ನು ಹೊಂದಿದ್ದು, ಒಂದನ್ನು ಬಾಡಿಗೆ ನೀಡಲಾಗಿದೆ.

ಸೊಸೈಟಿಯಸದಸ್ಯರಿಗೆಅನುಕೂಲವಾಗುವಂತೆ ಸದಸ್ಯರ ಮರಣೋತ್ತರ ನಿಧಿಯಿಂದ ಮೃತ ಸದಸ್ಯರ ವಾರಸುದಾರರಿಗೆ ಐದು ಸಾವಿರ ರೂ. ಗಳನ್ನು ನೀಡಲಾಗುವುದು. ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಪಡೆದಿರುವ ಸದಸ್ಯರ ಮೂರು ಮಕ್ಕಳಿಗೆ ಪ್ರಶಸ್ತಿಯೊಂದಿಗೆ ಪುರಸ್ಕರಿಸಿರುವುದು ಸೊಸೈಟಿಗೆ ಹೆಮ್ಮೆಯ ಸಂಗತಿ ಎಂದು ಅಧ್ಯಕ್ಷ ಜಿ.ಬಿ.ತೀರ್ಥಪ್ಪ ಸಂತಸ ವ್ಯಕ್ತಪಡಿಸಿದರು.

ಕಟ್ಟಡ ಆಧಾರಿತ ಸಾಲ, ವಾಯಿದೆ ಸಾಲ, ಕಂತು ಸಾಲ, ದ್ವಿಚಕ್ರ ವಾಹನ ಆಧಾರಿತ ಸಾಲ, ಕಾರು ಸಾಲ, ಠೇವಣಿ ಆಧಾರಿತ ಸಾಲ, ಯಂತ್ರೋಪಕರಣ ಆಧಾರಿತ ಸಾಲ ಹಾಗೂ ಬಂಗಾರದ ಮೇಲಿನ ಸಾಲದ ಕುರಿತು ವಾರ್ಷಿಕ ಮಹಾಸಭೆಯಲ್ಲಿ ಚರ್ಚಿಸಲಾಯಿತು.

ವಿಶ್ವಬಂಧು ಅರ್ಬನ್ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಉಪಾಧ್ಯಕ್ಷ ಟಿ.ನಾಗರಾಜ್(ನಂದಿ) ನಿರ್ದೇಶಕರುಗಳಾದ ಹೆಚ್.ಎಂ.ದ್ಯಾಮಣ್ಣ ಕೋಗುಂಡೆ, ಜಿ.ಬಿ.ಶೇಖರಪ್ಪ, ಶ್ರೀಮತಿ ಎಂ.ಸಿ.ಶೋಭ, ಹೆಚ್. ಎನ್.ಶಿವಪ್ರಸಾದ್, ಸಿ.ಮಹೇಶ್ವರಪ್ಪ, ದಿವಾಕರ್ ಸಂಕೋಳ್, ಶ್ರೀಮತಿ ಎಸ್.ಶೋಭಾವತಿ, ಜಿ.ಎನ್.ಶಿವಕುಮಾರ್, ಟಿ.ರುದ್ರಪ್ಪ, ಓಬಳೇಶಪ್ಪ ಇವರುಗಳು ವೇದಿಕೆಯಲ್ಲಿದ್ದರು.

ಸೊಸೈಟಿ ಸಿಬ್ಬಂದಿ ವರ್ಗದವರು ವಾರ್ಷಿಕ ಮಹಾಸಭೆಯಲ್ಲಿ ಹಾಜರಿದ್ದರು.

## ಕ್ರೀಡೆಗಳು ವಿದ್ಯಾರ್ಥಿಗಳಿಗೆ ಉತ್ತಮ ಭವಿಷ್ಯ ರೂಪಿಸುವ ಸಾಧನವಾಗಿದೆ



» ಚಳ್ಳಕೆರೆ

ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ಕಲಿಕೆಯ ಅವಧಿಯಲ್ಲಿ ಕ್ರೀಡಾ, ಸಾಂಸ್ಕೃತಿಕ ಕಾರ್ಯಕ್ರಮಗಳಿಗೂ ಸಹ ಹೆಚ್ಚು ಒತ್ತು ನೀಡಬೇಕು. ಪ್ರತಿಭಾಕಾರಂಜಿ ಮೂಲಕ ನಮ್ಮಲ್ಲಿರುವ ಕಲೆಯನ್ನು ಪ್ರದರ್ಶಿಸುವ ಅವಕಾಶ ಸರ್ಕಾರ ನೀಡಿದೆ. ಅದೇ ರೀತಿ ಕ್ರೀಡೆಯೂ ಸಹ ನಮಗೆ ಉತ್ತಮ ಭವಿಷ್ಯವನ್ನು ಒದಗಿಸಿಕೊಡಲಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ತಿಳಿಸಿದರು. ಅವರು, ತಾಲ್ಲೂಕಿನ ಗುಡಿಹಳ್ಳಿ ಗ್ರಾಮದ ಶ್ರೀಸೋಮಲಿಂಗೇಶ್ವರ ಪ್ರೌಢಶಾಲಾ ಆವರಣದಲ್ಲಿ ತಳಕು ಕ್ಲಸ್ಟರ್ ಮಟ್ಟದ ಕ್ರೀಡೆಯಲ್ಲಿ ವಿಜೇತರಾದ ಕ್ರೀಡಾಪಟುಗಳಿಗೆ ಬಹುಮಾನ ವಿತರಿಸಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಕ್ರೀಡೆಗೆ ಉತ್ತಮ ಅವಕಾಶವಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಇತ್ತೀಚಿನ ದಿನಗಳಲ್ಲಿ ಎಲ್ಲಾ ರಂಗದಲ್ಲೂ ಉತ್ತಮ ಭವಿಷ್ಯವನ್ನು ಕಂಡುಕೊಳ್ಳಲು ಯಶಸ್ವಿಯಾಗಿದ್ದಾರೆಂದರು. ಕ್ಲಸ್ಟರ್ ವಿಭಾಗದಲ್ಲಿ ರೇಣುಕಾಪುರದ ರೇಣಾಕಾದೇವಿ ಪ್ರೌಢಶಾಲೆ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಕಬ್ಬಡಿ ಪಂದ್ಯದಲ್ಲಿ ಪ್ರಥಮ ಬಹುಮಾನ, 400 ಮೀಟರ್ ಓಟ, ತಟ್ಟೆ ಎಸೆತದಲ್ಲಿ ಪ್ರಥಮ ಬಹುಮಾನ, ಜಾವಲಿಂಗ್‌ನಲ್ಲಿ ತಿರುಮಲ, ಎನ್. ಅಕ್ಷತ ಬಹುಮಾನ ಗಳಿಸಿದ್ದು ಅವರಿಗೆ ಬಹುಮಾನ ವಿತರಿಸಿದರು.

ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎಚ್.ಎಸ್.ಚಂದ್ರಾರೆಡ್ಡಿ, ಸಹ ಶಿಕ್ಷಕರಾದ ಅನಂತರೆಡ್ಡಿ, ಶ್ರೀನಿವಾಸ್, ನಾಗರಾಜು, ರಾಜಪ್ಪ, ಖಾದರ್‌ಸಾಬ್, ದೈಹಿಕ ಶಿಕ್ಷಕ ಎಂ.ಪಾಲಯ್ಯ ಮುಂತಾದವರು ಉಪಸ್ಥಿತರಿದ್ದರು.

### ನಗರ ವೀರಶೈವ ಸಂಘದ ಸರ್ವ ಸದಸ್ಯರ ಸಭೆ ಯಶಸ್ವಿ

## ಸಂಘದ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಿ

» ಚಳ್ಳಕೆರೆ

ನಗರದ ವೀರಶೈವ ಹಾಸ್ಟಲ್ ಸಭಾಂಗಣದಲ್ಲಿ ಚಳ್ಳಕೆರೆ ನಗರ ವೀರಶೈವ ಸಂಘದ ಸರ್ವಸದಸ್ಯರ ಸಾಮಾನ್ಯ ಸಭೆಯನ್ನು ನಡೆಸಲಾಯಿತು. ಅಧ್ಯಕ್ಷ ವಿ.ಮಂಜುನಾಥ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಸಂಘದ ಕಾರ್ಯದರ್ಶಿ ಕೋಟೆಜಯಣ್ಣ ಮಾತನಾಡಿ, ಚಳ್ಳಕೆರೆ ನಗರ ವೀರಶೈವ ಸಂಘ ಕಳೆದ ಹಲವಾರು ವರ್ಷಗಳಿಂದ ಸಮಾಜದ ಹಿತಕ್ಕಾಗಿ ನಿರಂತರ ಸೇವೆ ಸಲ್ಲಿಸುತ್ತಿದ್ದು, ಸಂಘದ ನಿರ್ದೇಶನದಲ್ಲಿ ಬಸವೇಶ್ವರ ವಿದ್ಯಾಸಂಸ್ಥೆಯ ಕಾರ್ಯಚಟುವಟಿಕೆಗಳನ್ನು ಸಹ ನಡೆಸಲಾಗುತ್ತಿದೆ. ವೀರಶೈವ ಹಾಸ್ಟಲ್



ಸಹಯೋಗದಲ್ಲಿ ನಗರ ವೀರಶೈವ ಸಂಘದ ಚಟುವಟಿಕೆಗಳಿಗೆ ಕ್ರಿಯಾಯೋಜನೆ ರೂಪಿಸಿ ಕಾರ್ಯಗತಗೊಳಿಸಲಾಗಿದೆ. ಸಂಘದ ಬೆಳವಣಿಗೆಗೆ ಸಹಕಾರ ನೀಡುತ್ತಾ ಬಂದಿರುವ ಎಲ್ಲಾ ನಿರ್ದೇಶಕರು,ಸಮುದಾಯದ ಬಂಧುಗಳು ಹಾಗೂ ಶಾಲಾಭಿವೃದ್ದಿ ಸಮಿತಿ ಅಭಿನಂದನೆ ಸಲ್ಲಿಸುವೆ ಎಂದರು. ಸಭೆಯಲ್ಲಿ ನಿರ್ದೇಶಕರಾದ ಶಂಕರಲಿಂಗಯ್ಯ, ಎ.ಮಂಜಣ್ಣ, ಡಿ.ಎಂ. ತಿಪ್ಪೇಸ್ವಾಮಿ, ಮಂಜುಳಾ, ಎಂ.ಪಿ.ತಿಪ್ಪೇಸ್ವಾಮಿ ಮುಂತಾದವರು ಪಾಲ್ಗೊಂಡಿದ್ದರು.

## ನಮ್ಮದು ರೈತ ಪರ ಸರ್ಕಾರ: ಆತಂಕ ಬೇಡ; ಸಚಿವ

» ಮೊದಲ ಪುಟದಿಂದ

ಭದ್ರಾ ಮೇಲ್ದಂಡೆ ಯೋಜನೆ ತ್ವರಿತ ಅನುಷ್ಠಾನಕ್ಕೆ ಅನುದಾನ ನೀಡಬೇಕು: ಬಯಲುಸೀಮೆ ಚಿತ್ರದುರ್ಗ ಜಿಲ್ಲೆಯ ಸಮಗ್ರ ನೀರಾವರಿ ಆಗಬೇಕು ಎಂಬ ಉದ್ದೇಶದಿಂದ ಭದ್ರಾ ಮೇಲ್ದಂಡೆ ಯೋಜನೆ ಜಾರಿಗೊಳಿಸಲಾಗಿದ್ದು, ಈ ಯೋಜನೆಯು ಕುಂಠಿತಗೊಂಡಿದೆ. ಭದ್ರಾ ಮೇಲ್ದಂಡೆ ಯೋಜನೆಯ ತ್ವರಿತ ಅನುಷ್ಠಾನಕ್ಕೆ ಸರ್ಕಾರ ಅನುದಾನ ಬಿಡುಗಡೆ ಮಾಡಬೇಕು ಎಂದು ರಾಷ್ಟ್ರೀಯ ಕಿಸಾನ್ ಸಂಘದ ಕೊಂಚೆ ಶಿವರುದ್ರಪ್ಪ ಮನವಿ ಮಾಡಿದರು. ರೈತರ ಕೃಷಿ ಪಂಪ್‌ಸೆಟ್‌ಗಳಿಗೆ ಹಗಲು ವೇಳೆಯಲ್ಲಿ ವಿದ್ಯುತ್ ನೀಡಬೇಕು. ಯಾವುದೇ ಕಾರಣಕ್ಕೂ ರಾತ್ರಿ ವೇಳೆ ವಿದ್ಯುತ್ ನೀಡಬಾರದು ಎಂದು ಹೇಳಿದರು.

**ಪ್ರಮುಖ ಸುದ್ದಿ**

# ಜಾನಪದ ಹಾಡುಗಾರ ಕಾಲ್ಕೆರೆ ಚಂದ್ರಪ್ಪನಿಗೆ ನುಡಿನಮನ

» ಚಿತ್ರದುರ್ಗ

ಗ್ರಾಮೀಣ ಭಾಗದಿಂದ ಹುಟ್ಟಿಕೊಂಡ ಜಾನಪದ ನೆಲೆಗಳನ್ನು ಉಳಿಸಬೇಕಾಗಿರುವುದರಿಂದ ಮೊದಲು ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸವಾಗಬೇಕೆಂದು ಸಾರ್ವಜನಿಕ ಶಿಕ್ಷಣ ಇಲಾಖೆ ನಿವೃತ್ತ ನಿರ್ದೇಶಕ ಡಾ.ಎಂ. ಮಲ್ಲಣ್ಣ ಹೇಳಿದರು.

ಸಮತಾ ಸಾಹಿತ್ಯ ವೇದಿಕೆ, ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ವೇದಿಕೆ, ಶಿಕ್ಷಕರ ಬಳಗ ಇವರ ಸಂಯುಕ್ತಾಶ್ರಯದಲ್ಲಿ ಜಾನಪದ ಹಾಡುಗಾರ ಕಾಲ್ಕೆರೆ ಚಂದ್ರಪ್ಪನಿಗೆ ಐ.ಎಂ.ಎ.ಹಾಲ್‌ನಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ನುಡಿನಮನ ಹಾಗೂ ಕವಿಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದರು.

ಕಾಲ್ಕೆರೆ ಚಂದ್ರಪ್ಪ ಶಿಕ್ಷಕನಾಗಿದ್ದುಕೊಂಡು ಬಿಡುವಿನ ಸಮಯದಲ್ಲಿ ಜಾನಪದ ಹಾಡುಗಳನ್ನು ಹಾಡುತ್ತ ಅಮೋಘವಾದ ಕಂಠದ ಮೂಲಕ ಎಲ್ಲರ ಮನ ಗೆದ್ದಿದ್ದರು. ಕಾಲ್ಕೆರೆ ಚಂದ್ರಪ್ಪನವರು ಇಷ್ಟು ಬೇಗನೆ



ಎಲ್ಲರನ್ನು ಅಗಲುತ್ತಾರೆಂದು ಯಾರು ನಿರೀಕ್ಷಿಸಿರಲಿಲ್ಲ. ಅವರ ನಿಧನ ಜಾನಪದ ಲೋಕಕ್ಕೆ ತುಂಬಲಾರದ ನಷ್ಟವುಂಟಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಡಾ.ಟಿಪ್ಪುಖಾಸಿಂ ಆಲಿ ಮಾತನಾಡಿ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗಳನ್ನುತುಂಬಾ ಕಡಿಮೆ ಸಂಖ್ಯೆಯಲ್ಲಿ ನೀಡಲಾಗುತ್ತಿದೆ. ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸುತ್ತಿರುವ ಹೆಚ್ಚು ಹೆಚ್ಚು ಕಲಾವಿದರನ್ನು ಗುರುತಿಸಿ ರಾಜ್ಯೋತ್ಸವ ಪ್ರಶಸ್ತಿಗಳನ್ನು ನೀಡಿ ಸಾಹಿತಿಗಳು ಹಾಗೂ ಕಲಾವಿದರಿಗೆ ಪ್ರೋತ್ಸಾಹಿಸಬೇಕಿದೆ ಎಂದು ಸಲಹೆ ನೀಡಿದರು.ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ವೇದಿಕೆ ಅಧ್ಯಕ್ಷ ಕೆ.ಪರಶುರಾಮ್ ಗೊರಪ್ಪರ್ ಮಾತನಾಡುತ್ತ ಎಲೆಮರೆಯ ಕಾಯಿಯಂತೆ ಕಲಾ ಸೇವೆಯಲ್ಲಿ ತೊಡಗಿರುವ ಕಲಾವಿದರು ಹಾಗೂ ಸಾಹಿತಿಗಳನ್ನು ಗುರುತಿಸುವ ಕೆಲಸ ಮುಂದಿನ ದಿನಗಳಲ್ಲಿ ಆಗಬೇಕು. ಚಿತ್ರದುರ್ಗದಲ್ಲಿ ರಾಜ್ಯ ಮಟ್ಟದ ಬೃಹತ್ ಕಲೋತ್ಸವ ಆಚರಿಸಿ ಗ್ರಾಮೀಣ ಪ್ರದೇಶಗಳಲ್ಲಿನ ಕಲಾವಿದರು, ಜಾನಪದ ಹಾಡುಗಾರರನ್ನು ಬೆಳಕಿಗೆ ತರಬೇಕೆಂದು ಮನವಿ ಮಾಡಿ ಕಾಲ್ಕೆರೆ ಚಂದ್ರಪ್ಪನವರ ಕುಟುಂಬಕ್ಕೆ ಭಗವಂತ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.

ಸಮತಾ ಸಾಹಿತ್ಯ ವೇದಿಕೆ ಅಧ್ಯಕ್ಷ ಓ.ವೆಂಕಟೇಶ್‌ನಾಯ್ಕ ಮಾತನಾಡಿ ಕವಿಗಳು ಉತ್ತಮ ಕವನಗಳನ್ನು ವಾಚಿಸಿದ್ದಾರೆ. ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ವೇದಿಕೆ ಪ್ರತಿ ವರ್ಷವೂ ಕಲಾವಿದರನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ಮಾಡಿಕೊಂಡು ಬರುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಶಂಕರ್‌ನಾಗ್ ಅಭಿಮಾನಿಗಳ ಕಲಾ ವೇದಿಕೆ ಅಧ್ಯಕ್ಷ ದಿವ್ಯ ಶಂಕರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಅರಣ್ಯ ಮಹಾವಿದ್ಯಾಲಯ ಶಿರಸಿಯ ನಿವೃತ್ತ ಡೀನ್ ಡಾ.ಹೆಚ್.ಶಿವಣ್ಣ, ಕರ್ನಾಟಕ ರತ್ನ ಡಾ.ರಾಜ್‌ಕುಮಾರ್ ಸಾಂಸ್ಕೃತಿಕ ಕಲಾ ವೇದಿಕೆ ಗೌರವಾಧ್ಯಕ್ಷ ಕೆ.ಬಿ.ಕೃಷ್ಣಪ್ಪ, ಪ್ರಧಾನ ಕಾರ್ಯದರ್ಶಿ ಯಲ್ಲೇಶ್, ಜಗದೀಶ್, ಎಂ.ಬಿ.ನಾಗರತ್ನ, ಹಿರಿಯ ಕವಿಯತ್ರಿ ಷರೀಫಾಬಿ, ವೈ.ಉಷಾದೇವಿ, ಜೆ.ಟಿ.ಗಂಗಮ್ಮ ವೇದಿಕೆಯಲ್ಲಿದ್ದರು.

## ಫಾಸ್ಟ್ ನ್ಯೂಸ್

### ಹೊಸ ನ್ಯಾಯಬೆಲೆ ಅಂಗಡಿಗೆ ಅರ್ಜಿ ಆಹ್ವಾನ

ಚಿತ್ರದುರ್ಗ: ಚಿತ್ರದುರ್ಗ ನಗರದಲ್ಲಿ ಜವಾಯಿ ಮೊಹಲ್ಲಾ ಮಿಲ್ಲತ್ ಸ್ಕೂಲ್ ಹತ್ತಿರದ ಪ್ರದೇಶದಲ್ಲಿ ಹೊಸದಾಗಿ ನ್ಯಾಯಬೆಲೆ ಅಂಗಡಿ ತೆರಯುವುದಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟೆಂಬರ್ 27 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ಆಸಕ್ತರು ನಿಯಮಾನುಸಾರ ನಿಗಧಿತ ನಮೂನೆ-ಎ ಅಗತ್ಯ ದೃಢೀಕೃತ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಚಿತ್ರದುರ್ಗ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಿಗೆ ಸಲ್ಲಿಸಬಹುದು. ನಿಗದಿತ ಅವಧಿಯ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಯಮಾನುಸಾರ ರಾಜ್ಯ ಸರ್ಕಾರಿ ಸ್ವಾಮ್ಯದ ನಿಗಮ, ಸಂಸ್ಥೆ, ಗ್ರಾಮ ಹಾಗೂ ಸ್ಥಳೀಯ ಪಂಚಾಯಿತಿಗಳು, ಕೃಷಿ ಪತ್ತಿನ, ತೋಟಗಾರಿಕೆ, ಪ್ರಾಥಮಿಕ ಬಳಕೆದಾರರು, ಆದಿವಾಸಿ, ನೇಕಾರ, ಮಹಿಳಾ, ಅಂಗವಿಕಲ ಸೇರಿದಂತೆ ವಿವಿಧ ಸಹಕಾರಿ ಸಂಘಗಳು, ಸ್ತ್ರೀ ಶಕ್ತಿ ಹಾಗೂ ಮಹಿಳಾ ಸ್ವಸಹಾಯ ಗುಂಪುಗಳು, ವಿಕಲಚೇತನರು ಹಾಗೂ ತೃತೀಯ ಲಿಂಗಿಗಳನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುವುದು. ಅರ್ಜಿ ಸಲ್ಲಿಸುವ ಸಹಕಾರಿ ಸಂಘಗಳು ಕನಿಷ್ಠ 3 ವರ್ಷದ ಹಿಂದೆ ನೋಂದಾಯಿತರಾಗಿರಬೇಕು. ಕನಿಷ್ಠ ರೂ.2 ಲಕ್ಷರೂಪಾಯಿಗಳ ಬ್ಯಾಂಕ್ ಮೊತ್ತ ಬ್ಯಾಲೆನ್ಸ್ ಹೊಂದಿರಬೇಕು. ಇದೇ ಮಾದರಿಯಲ್ಲಿ ಸ್ತ್ರೀ ಸಹಾಯ ಸಂಘಗಳು ರೂ.1 ಲಕ್ಷ ಹಾಗೂ ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಕನಿಷ್ಠ ರೂ.50 ಸಾವಿರ ಬ್ಯಾಂಕ್ ಠೇವಣಿ ಹೊಂದಿರಬೇಕು. ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕಡ್ಡಾಯವಾಗಿ ಹತ್ತನೇ ತರಗತಿ ಪಾಸಾಗಿರಬೇಕು. (ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಮಾತ್ರ), ಸಹಕಾರ ಸಂಘ, ಸಂಸ್ಥೆಗಳ ಮತ್ತು ಸ್ವಸಹಾಯ ಸಂಘಗಳಾದರೆ ನೋಂದಾವಣೆ ಪತ್ರ, ಸಹಕಾರ ಸಂಘ ಸಂಸ್ಥೆಯಾದರೆ ಕಳೆದ 3 ವರ್ಷಗಳ ದೃಢೀಕೃತ ಲೆಕ್ಕ ಪರಿಶೋಧನಾ ವರದಿ, ಬೈಲಾ, ಪ್ರತಿನಿಧಿ ನೇಮಕ ನಿರ್ಣಯ, ಅರ್ಜಿ ಸಲ್ಲಿಸಿದ ಸಹಕಾರಿ ಸಂಘದ ಮೇಲೆ ಯಾವುದೆ ವಿಚಾರಣೆ, ಲಿಕ್ವಿಡೇಷನ್ ನಡವಳಿ ನಡೆದಿರುವುದಿಲ್ಲ ಎಂಬ ಬಗ್ಗೆ ಸಕ್ಷಮ ಪ್ರಾಧಿಕಾರಿಯು ನೀಡಿರುವ ದೃಢೀಕರಣ ಪತ್ರ, ವ್ಯಾಪಾರದ ಮಳಿಗೆಯ ಖಾತೆ ಅಥವಾ ಬಾಡಿಗೆ ಕರಾರು ಪತ್ರ, ಹಣಕಾಸು ಹೊಂದಿರುವ ಬಗ್ಗೆ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಸಹಕಾರ ಸಂಘದವರು ಅಧಿಕೃತವಾಗಿ ನೇಮಿಸಿರುವ ಪ್ರತಿನಿಧಿಯ ಇತ್ತೀಚಿನ 3 ಭಾವಚಿತ್ರ, ಅಭ್ಯರ್ಥಿಗಳು ಯಾವುದೇ ಕ್ರಿಮಿನಲ್ ಪ್ರಕರಣಗಳು ಹೊಂದಿಲ್ಲದಿರುವ ಬಗ್ಗೆ ಪೊಲೀಸ್ ಇಲಾಖೆಯಿಂದ ಪೊಲೀಸ್ ವೆರಿಫಿಕೇಷನ್ ರಿಪೋ□□□□ನ್ನು ಪಡೆದು ಕಡ್ಡಾಯವಾಗಿ ಸಲ್ಲಿಸಬೇಕು. ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ದೃಢೀಕರಣ ಪತ್ರ ಸಲ್ಲಿಸಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ಮೈಸೂರಿನ ಕೆ.ಆರ್. ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಲಿದ್ದೇವೆ; ಸಿಎಂ

ಮೈಸೂರು: ಕೆ.ಆರ್ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸಲಿದ್ದೇವೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು. 'ಇದು 1,200 ಬೆಡ್‌ಗಳಿರುವ ಬೃಹತ್ ಆಸ್ಪತ್ರೆಯಾಗಿದೆ. ನಿರಂತರವಾಗಿ ಕೆ.ಆರ್.ಆಸ್ಪತ್ರೆಯ ಕಾಯಕಲ್ಪ ನಡೆಯಲಿದೆ. ಚಿಕಿತ್ಸೆಗಾಗಿ ಕೆ.ಆರ್ .ಆಸ್ಪತ್ರೆಗೆ 5 ಜಿಲ್ಲೆಗಳಿಂದ ಜನ ಬರುತ್ತಾರೆ. ಜನರ ಅನುಕೂಲಕ್ಕಾಗಿ ಆಸ್ಪತ್ರೆಯನ್ನು ಮೇಲ್ದರ್ಜೆಗೆ ಏರಿಸ್ತೇವೆ ಎಂದರು.

### ದ್ವೇಷದ ರಾಜಕಾರಣ ಮಾಡಬಾರದು; ಶಾಸಕ ಪ್ರದೀಪ್ ಈಶ್ವರ್

ಚಿಕ್ಕಬಳ್ಳಾಪುರ: ಯಾರು ಕೂಡ ದ್ವೇಷದ ರಾಜಕಾರಣ ಮಾಡಬಾರದು, ದ್ವೇಷದ ರಾಜಕಾರಣ ಮಾಡಿದರೆ ಪ್ರದೀಪ್ ಈಶ್ವರ್ ಅಂತಹವರು ಹುಟ್ಟಿಕೊಳ್ತಾರೆ ಎಂದು ಚಿಕ್ಕಬಳ್ಳಾಪುರ ತಾಲ್ಲೂಕಿನ ಪೆರೇಸಂದ್ರ ಗ್ರಾಮದಲ್ಲಿ ಶಾಸಕ ಪ್ರದೀಪ್ ಈಶ್ವರ್ ಹೇಳಿದರು.

### ಲೋಕಾಯುಕ್ತ ಬಲೆಗೆ ಬಿದ್ದ ಬಿಬಿಎಂಪಿ ಎಇಇ

ಬೆಂಗಳೂರು: ಬಿಬಿಎಂಪಿ ಸೀವೇಜ್ ವಾಟರ್ ಮ್ಯಾನೇಜ್‌ಮೆಂಟ್ ಎಇಇ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಕಾಮಗಾರಿಯ ಬಿಲ್ ಬಿಡುಗಡೆ ಮಾಡಲು 50 ಸಾವಿರ ಲಂಚ ಬೇಡಿಕೆಯಿಟ್ಟಿದ್ದರು. ಇಂದು ಮುಂಗಡ10 ಸಾವಿರ ಲಂಚ ಸ್ವೀಕರಿಸುವಾಗ ಎಇಇ ಶಿವಣ್ಣ ಎಂಬುವವರು ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

### ಸುಟ್ಟಗಾಯಗಳ ಆಸ್ಪತ್ರೆಯ ನೂತನ ಕಟ್ಟಡ ಉದ್ಘಾಟಿಸಿದ ಸಿಎಂ

ಮೈಸೂರು: ಕೆ.ಆರ್ ಆಸ್ಪತ್ರೆ ಆವರಣದಲ್ಲಿ ನಿರ್ಮಿಸಲಾದ ಸುಟ್ಟಗಾಯಗಳ ಆಸ್ಪತ್ರೆಯ ಹೊಸ ಕಟ್ಟಡವನ್ನು ಇಂದು(ಆ.29) ಸಿಎಂ ಸಿದ್ದರಾಮಯ್ಯನವರು ಲೋಕಾರ್ಪಣೆ ಮಾಡಿದರು.

# ಶೀಘ್ರ ಬರ ಘೋಷಣೆ: ಚಲುವರಾಯಸ್ವಾಮಿ

» ಚಿತ್ರದುರ್ಗ



ಹವಾಮಾನ ಮುನ್ಸೂಚನೆಯಂತೆ ಆಗಸ್ಟ್ ತಿಂಗಳಿನಲ್ಲಿ ಉತ್ತಮ ಮಳೆ ಬೀಳುವ ನಿರೀಕ್ಷೆ ಇತ್ತು. ಆದರೆ ಪ್ರಸ್ತುತ ಮಾಹೆಯಲ್ಲಿ ರಾಜ್ಯದಲ್ಲಿ ಶೇ.99 ರಷ್ಟು ಮಳೆ ಕೊರತೆಯಾಗಿದೆ. 130 ತಾಲೂಕುಗಳ ಬರ ಸ್ಥಿತಿ ಕುರಿತು ವರದಿ ಸಲ್ಲಿಸುವಂತೆ ಆಯಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಆಗಸ್ಟ್.30 ರಂದು ವರದಿ ಸರ್ಕಾರದ ಕೈ ಸೇರಲಿದೆ. ಇದನ್ನು ಆಧರಿಸಿ ಬರ ಘೋಷಣೆ ಕುರಿತಂತೆ ಸಭೆ ನಡೆಸಿ ಸೆಪ್ಟೆಂಬರ್ ಮೊದಲ ವಾರದಲ್ಲಿ ತೀರ್ಮಾನ ಕೈಗೊಳ್ಳಲಾಗುವುದು ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು.

ಮಂಗಳವಾರ ಚಿತ್ರದುರ್ಗ ಜಿಲ್ಲಾ ಪ್ರವಾಸ ಕೈಗೊಂಡ ಅವರು, ತಾಲ್ಲೂಕಿನ ಲಕ್ಷ್ಮೀಸಾಗರ ಗ್ರಾಮದ ಜಮೀನುಗಳಿಗೆ ಭೇಟಿ, ಮಳೆ ಕೊರತೆಯಿಂದ ಹಾನಿಗೆ ಒಳಗಾದ ಮೆಕ್ಕೆಜೋಳ, ಶೇಂಗಾ ಹಾಗೂ ರಾಗಿಬೆಳೆಗಳನ್ನುವೀಕ್ಷಿಸಿದರು. ಲಕ್ಷ್ಮೀಸಾಗರ ಗ್ರಾಮದ ಸಲುಪಣ್ಣ, ಶಿವಮೂರ್ತಿ ಅವರ ಮೆಕ್ಕೆಜೋಳ ಹೊಲಕ್ಕೆ ಹಾಗೂ ಈರಮ್ಮ ಅವರ ರಾಗಿ ಹೊಲ ಮತ್ತು ನಾಗರಾಜಪ್ಪ ಅವರ ಶೇಂಗಾ ಹೊಲಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಚಿವರು, ಮಳೆಯ ಕೊರತೆಯಿಂದಾಗಿ ಬೆಳೆ ಹಾಳಾಗಿರುವ ಬಗ್ಗೆ ಮಾಹಿತಿ ಪಡೆದುಕೊಂಡರು, ಈ ಸಂದರ್ಭದಲ್ಲಿ ರೈತರು, ಬಿತ್ತಿದ ಬೆಳೆ ಹಾಳಾಗಿರುವ ಬಗ್ಗೆ ಸಚಿವರಲ್ಲಿ ತಮ್ಮ ಅಳಲು ತೋಡಿಕೊಂಡರು.

ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಸಚಿವರು, ಚಿತ್ರದುರ್ಗ ಜಿಲ್ಲೆಯಲ್ಲಿ ಶೇ.93 ರಷ್ಟು ಬಿತ್ತನೆಯಾಗಿದೆ. ಆದರೆ ಸಂಪೂರ್ಣವಾಗಿ ಮಳೆ ಕೈಕೊಟ್ಟಿದೆ. ಮಳೆ ಕೊರತೆ ಕಂಡುಬಂದರೆ ಬರ ಎಂದು ಘೋಷಣೆ ಮಾಡಲಾಗುತ್ತದೆ. ವಾಸ್ತವ ಸ್ಥಿತಿ ತಿಳಿಯುವ ಸಲುವಾಗಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಂತರ್ ಇಲಾಖೆ ಸಮೀಕ್ಷೆ ನಡೆಸಿ, ವಸ್ತು ಸ್ಥಿತಿಯ ವರದಿ ನೀಡಲು ಸೂಚನೆ ನೀಡಲಾಗಿದೆ. ಬರದಿಂದ ಸಂಕಷ್ಟದಲ್ಲಿ ಇರುವ ರೈತರ ನೆರವಿಗೆ ಸರ್ಕಾರ ಸಿದ್ಧವಿದೆ. ಸರ್ಕಾರದ ಮಟ್ಟದಲ್ಲೂ ಶಾಸಕರು ಹಾಗೂ ಹಲವು ಮಂತ್ರಿಗಳು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಮೇಲೆ ಒತ್ತಡ ತರುತ್ತಿದ್ದಾರೆ.

ಮೊದಲಿನಿಂದಲೂ ಚಿತ್ರದುರ್ಗ ಕಡಿಮೆ ಮಳೆ ಬೀಳುವ ಪ್ರದೇಶ. ರಾಜ್ಯದ ಮಧ್ಯ ಭಾಗದಲ್ಲಿ ಇರುವ ಜಿಲ್ಲೆಯ ರೈತರ ಸ್ಥಿತಿ ಅರಿಯುವ ಸಲುವಾಗಿಯೇ, ಜಿಲ್ಲಾ ಮಂತ್ರಿಗಳು ಹಾಗೂ ಸ್ಥಳೀಯ ಶಾಸಕರನ್ನು ಸಂಪರ್ಕಿಸಿ ಜಿಲ್ಲಾ ಪ್ರವಾಸ ಕೈಗೊಂಡಿದ್ದೇನೆ. ವಾಸ್ತವಿಕ ವರದಿ ಬಂದ ನಂತರ, ಬರ ಪೀಡಿತ ತಾಲೂಕುಗಳ ಸಂಖ್ಯೆ ಹೆಚ್ಚು ಕಡಿಮೆಯಾಗಲಿದೆ. ಬರ ಪಟ್ಟಿಯಲ್ಲಿ ಜಿಲ್ಲೆಯಲ್ಲಿ 2 ತಾಲ್ಲೂಕುಗಳು ಬಿಟ್ಟು ಹೋಗಿದ್ದರೆ ಪರೀಶಿಲಿಸಿ ಸೇರಿಸಲಾಗುವುದು. ಮಾರ್ಗ ಸೂಚಿಗಳ ಅನುಸಾರ ಯಾವ ತಾಲ್ಲೂಕುಗಳಲ್ಲಿ ಬರ ಲಕ್ಷಣಗಳು ಕಂಡುಬರುತ್ತದೆ ಅವುಗಳನ್ನು ಬರ ತಾಲ್ಲೂಕು ಎಂದು ಘೋಷಣೆ ಮಾಡಲಾಗುವುದು. ಸರ್ಕಾರ ರಾಜ್ಯದ 6.5 ಕೋಟಿ ಜನರ ಸಂಕಷ್ಟಗಳಿಗೆ ಸ್ಪಂದಿಸಲು ಪ್ರಯತ್ನಿಸುತ್ತದೆ. ಬೆಳೆ ಪರಿಹಾರದ ಹಣ ತಾಂತ್ರಿಕ ಕಾರಣದಿಂದ ಬೇರೆಯವರ ಖಾತೆಗೆ ಜಮೆ ಆಗಿದ್ದರೆ ಅದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಇಂದು ಕಾವೇರಿ ನದಿ ನೀರು ನಿರ್ವಹಣಾ ಪ್ರಾಧಿಕಾರದ ಸಭೆ ನಡೆಯಲಿದೆ. ಕಾವೇರಿ ನದಿ ನೀರು ನಿಯಂತ್ರಣ ಪ್ರಾಧಿಕಾರ ಪ್ರತಿ ದಿನ 5000 ಕ್ಯೂಸೆಕ್ಸ್ ಕಾವೇರಿ ನದಿ ನೀರು ತಮಿಳುನಾಡಿಗೆ ಹರಿಸುವಂತೆ ಹೇಳಿದೆ. ಸರ್ಕಾರ ಇದಕ್ಕೆ ಒಪ್ಪಿಲ್ಲ. ಸರ್ವೋಚ್ಚನ್ಯಾಯಾಲಯ ಹಾಗೂ ನಿಯಂತ್ರಣ ಪ್ರಾಧಿಕಾರದ ನಡುವಿನ ಕೊಂಡಿಯಂತೆ ನಿರ್ವಹಣಾ ಪ್ರಾಧಿಕಾರ ಕೆಲಸ ನಿರ್ವಹಿಸುತ್ತದೆ.

ಈ ಸಭೆಯ ನಿರ್ಣಯ ಆಧರಿಸಿ ತಾಂತ್ರಿಕ ಪರಿಣಿತರಿಂದ ಸಲಹೆ ಪಡೆದು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಮುಂದಿನ ಕ್ರಮ ಕೈಗೊಳ್ಳುವರು ಎಂದು ಮಾಧ್ಯಮದವರ ಪ್ರಶ್ನೆಗೆ ಸಚಿವ ಚಲುವರಾಯ ಸ್ವಾಮಿ ಉತ್ತರಿಸಿದರು. ಕೇಂದ್ರ ಸರ್ಕಾರಕ್ಕೆ ಬರ ಪರಿಹಾರ ಕಾರ್ಯಗಳ ನಿಯಮಗಳನ್ನು ಸಡಿಲಗೊಳಿಸುವಂತೆ ಮನವಿ ಮಾಡಿ ಪತ್ರ ಬರೆಯಲಾಗಿದೆ. ಕೇಂದ್ರದಿಂದ ಯಾವುದೇ ರೀತಿಯ ಉತ್ತರ ಬಂದಿಲ್ಲ. ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಪರಿಹಾರ ನೀಡುವ ಮಾರ್ಗ ಸೂಚಿಗಳಲ್ಲಿ ಕೂಡ ಸರಳತೆ ತರಲು ಯೋಚಿಸಲಾಗುತ್ತದೆ. ಜಿಲ್ಲಾಧಿಕಾರಿಗಳಿಗೆ ಈ ಕುರಿತು ಸೂಚನೆ ನೀಡಲಾಗಿದೆ ಎಂದು ಈ ವೇಳೆ ಸ್ಪಷ್ಟಪಡಿಸಿದರು. ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಶಾಸಕರಾದ ಕೆ.ಸಿ.ವೀರೇಂದ್ರ ಪಪ್ಪಿ, ಟಿ.ರಘುಮೂರ್ತಿ, ಕೃಷಿ ಇಲಾಖೆ ಆಯುಕ್ತ ವೈ.ಎಸ್.ಪಾಟೀಲ್, ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಸೇರಿದಂತೆ ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಮಗ್ರ ಕೃಷಿ ಪದ್ಧತಿಯಿಂದ ರೈತರಿಗೆ ಶಾಶ್ವತ ಆರ್ಥಿಕ ಭದ್ರತೆ: ಎನ್. ಚಲುವರಾಯಸ್ವಾಮಿ

■ ಚಿತ್ರದುರ್ಗ



ಸಂಯೋಜಿತ ಸಮಗ್ರ ಕೃಷಿ ಪದ್ಧತಿ ಹಾಗೂ ಸಾವಯವ ಬೇಸಾಯ ಅಳವಡಿಕೆಯಿಂದ ಉತ್ತಮ ಆದಾಯ ದೊರೆತು ರೈತರಿಗೆ ಶಾಶ್ವತ ಆರ್ಥಿಕ ಭದ್ರತೆ ಸಿಗಲಿದ್ದು, ರೈತರು ಈ ನಿಟ್ಟಿನಲ್ಲಿ ಸಮಗ್ರ ಕೃಷಿ ಪದ್ಧತಿ ಅಳವಡಿಕೆಗೆ ಮುಂದಾಗಬೇಕು ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಹೇಳಿದರು.

ಚಿತ್ರದುರ್ಗ ಜಿಲ್ಲೆಯ ದೊಡ್ಡ ಸಿದ್ದವನಹಳ್ಳಿ ಗ್ರಾಮದ ಜ್ಞಾನೇಶ್ ಅವರ ಸಾವಯವ ಹಾಗೂ ಸಮಗ್ರ ಕೃಷಿ ತೋಟಕ್ಕೆ ಭೇಟಿ ನೀಡಿ ಪರಿಶೀಲಿಸಿ, ಕೃಷಿಕರ ಅಭಿಪ್ರಾಯ ಆಲಿಸಿದ ನಂತರ ಸಚಿವರು ಮಾತನಾಡಿದರು. ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆ ಸಮಸ್ಯೆ ಇರುವ ಸಂದರ್ಭದಲ್ಲಿ ಭಾರತೀಯ ಕಿಸಾನ್ ಸಂಘ ದೇಸಿ ಹೆಸರಿನಲ್ಲಿ ಸಾವಯವ ಉತ್ಪನ್ನಗಳ ಬ್ರಾಂಡ್ ಸೃಷ್ಟಿಸಿ ಉತ್ತಮ ಬೇಡಿಕೆ ಪಡೆದಿರುವುದು ಶ್ಲಾಘನೀಯ ಎಂದು ಅವರು ಮೆಚ್ಚುಗೆ ವ್ಯಕ್ತಪಡಿಸಿದರು ಚಿತ್ರದುರ್ಗ ಅತ್ಯಂತ ಕಡಿಮೆ ಮಳೆ ಬೀಳುವ ಪ್ರದೇಶ. ರೈತರು ಆತ್ಮವಿಶ್ವಾಸ ಕಳೆದುಕೊಳ್ಳದೆ ಬದುಕು ಗಟ್ಟಿಗೊಳಿಸಬೇಕು. ತಾವು ಕೃಷಿ ಸಚಿವರಾದ ನಂತರ ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪ ಅವರ ಗ್ರಾಮದಿಂದಲೇ ಮೊದಲ ಬಾರಿಗೆ ತಮ್ಮ ಜಿಲ್ಲಾ ಪ್ರವಾಸ, ಸಂವಾದ ಕಾರ್ಯಕ್ರಮ ಪ್ರಾರಂಭಿಸುತ್ತಿರುವುದು ಸ್ಮರಣೀಯ. ಹಿಂದಿನ ರಾಜಕಾರಣವೇ ಬೇರೆ, ಈಗಿನ ರಾಜಕೀಯವೇ ಬೇರೆ. ಆದರೆ ನಿಜಲಿಂಗಪ್ಪನವರ ಬದುಕು ಎಲ್ಲರಿಗೂ ಅನುಕರಣೀಯ ಎಂದು ಅವರು ಸ್ಮರಿಸಿದರು. ಸಾವಯವ ಕೃಷಿಯಲ್ಲಿ ಸಾರ್ಥಕ ಬದುಕು ಕಟ್ಟಿಕೊಂಡಿರುವ ಕೃಷಿಕ ಜ್ಞಾನೇಶ್ ಎಲ್ಲರಿಗೂ ಪ್ರೇರಣಾ ಶಕ್ತಿ ಹಾಗೂ ಆದರ್ಶವಾಗಿದ್ದಾರೆ ಎಂದರು.

ಸಮಗ್ರ ಕೃಷಿ ಪದ್ಧತಿಯು ದೊಡ್ಡ ದೊಡ್ಡ ಹಿಡುವಳಿದಾರರಿಗೆ ಸೂಕ್ತವಲ್ಲ, ಇದೇನಿದ್ದರೂ ಸಣ್ಣಮತ್ತು ಅತಿ ಸಣ್ಣ ರೈತರಿಗೆ ಸೂಕ್ತವಾದುದು. ಯಾರು ಕಡಿಮೆ ಕೃಷಿ ಭೂಮಿ ಹೊಂದಿರುತ್ತಾರೆಯೋ ಅಂತಹ ರೈತರಿಗೆ ಸಮಗ್ರ ಕೃಷಿ ಪದ್ಧತಿ ಶಾಶ್ವತ ಆದಾಯ ತರಲಿದೆ. ಕೆಲವೊಮ್ಮೆ ತರಕಾರಿ ಬೆಳೆಗಳಿಗೆ ಉತ್ತಮ ಬೆಲೆ ದೊರೆತು ಒಳ್ಳೆಯ ಲಾಭ ಗಳಿಸಿದರೆ, ಇನ್ನೊಮ್ಮೆ ಮಾಡಿದ ಖರ್ಚು ಕೂಡ ದೊರೆಯದ ಪರಿಸ್ಥಿತಿ ಉಂಟಾಗುತ್ತದೆ. ಆದರೆ ಇಂತಹ ಪರಿಸ್ಥಿತಿಯ ನಡುವೆಯೂ ಜ್ಞಾನೇಶ ಅವರು ಗುಣಮಟ್ಟಕ್ಕೆ ಹಾಗೂ ಸಾವಯವ ಕೃಷಿಗೆ ಆದ್ಯತೆ ನೀಡಿ, ಒಳ್ಳೆಯ ಲಾಭ ಗಳಿಸಿರುವುದು ನಿಜಕ್ಕೂ ಶ್ಲಾಘನೀಯ.

ಸಮಗ್ರಕೃಷಿವ್ಯವಸ್ಥೆಯು ನಿರಂತರ ಆದಾಯ ತರುವ ಮೂಲಕ, ಬರ ಪರಿಸ್ಥಿತಿಯನ್ನು ಸಮರ್ಥವಾಗಿ ಎದುರಿಸಲು ನೆರವಾಗುತ್ತದೆ. ಈ ನಿಟ್ಟಿನಲ್ಲಿ ರೈತರು ಇಂತಹ ಪದ್ಧತಿಯನ್ನು ಅಳವಡಿಸಿಕೊಳ್ಳಲು ಮುಂದಾಗಬೇಕು, ಇತರೆ ರೈತರಿಗೂ ಈ ಬಗ್ಗೆ ಅರಿವು ಮೂಡಿಸಬೇಕು ಎಂದು ಸಚಿವ ಎನ್. ಚಲುವರಾಯಸ್ವಾಮಿ ಮನವಿ ಮಾಡಿದರು.

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರು ಮಾತನಾಡಿ, ಉನ್ನತ ವ್ಯಾಸಂಗ ಮಾಡಿ, ಸರ್ಕಾರಿ ಉದ್ಯೋಗವನ್ನು ತೊರೆದು, ಕೃಷಿಯತ್ತ ಆಕರ್ಷಿತರಾಗಿ ಸಾಧನೆ ಮಾಡಿರುವ ರೈತ ಜ್ಞಾನೇಶ್ ಅವರು ಇತರ ರೈತರಿಗೆ ಮಾದರಿಯಾಗಿದ್ದಾರೆ. ಇವರು ಕೃಷಿ, ಜೇನು ಸಾಕಾಣಿಕೆ, ಹೈನುಗಾರಿಕೆ, ವಿವಿಧ ತೋಟಗಾರಿಕೆ ಬೆಳೆಗಳು, ಬೆಳೆಗಳ ಮೌಲ್ಯವರ್ಧನೆ ಹಾಗೂ ಮಾಡಿಕೊಂಡಿರುವ ಮಾರುಕಟ್ಟೆ ವ್ಯವಸ್ಥೆ ನಿಜಕ್ಕೂ ಇತರರಿಗೆ ಅನುಕರಣೀಯವಾಗಿದೆ. ಕೃಷಿಯ ಸವಾಲು ಹಾಗೂ ಅದನ್ನು ಮೆಟ್ಟಿ ನಿಲ್ಲಲು ಸಾವಯವ ಕೃಷಿಗೆ ಇರುವ ಸಾಧ್ಯತೆಗಳ ಬಗ್ಗೆ ಗಮನ ಸೆಳೆದ ಸಚಿವರು, ರೈತರು ಸಾವಯವ ಕೃಷಿಯ ಲಾಭ ಪಡೆಯುವಂತೆ ಕರೆ ನೀಡಿದರು. ಜಿಲ್ಲೆಯಲ್ಲಿ ಮಳೆಯ ಕೊರತೆಯಿಂದಾಗಿ ಬರ ಪರಿಸ್ಥಿತಿ ತಲೆದೋರಿದ್ದು, ಬರಪೀಡಿತ ತಾಲ್ಲೂಕುಗಳ ಪಟ್ಟಿಯಿಂದ ಜಿಲ್ಲೆಯ ಎರಡು ತಾಲ್ಲೂಕುಗಳ ಕೈಬಿಟ್ಟು ಹೋಗಿರುವ ಬಗ್ಗೆ ಕೃಷಿ ಸಚಿವರೊಂದಿಗೆ ಚರ್ಚಿಸಲಾಗಿದೆ. ಸೆಪ್ಟಂಬರ್ ಮೊದಲ ವಾರದಲ್ಲಿ ಬರ ಪರಿಸ್ಥಿತಿಯ ಬಗ್ಗೆ ರಾಜ್ಯದ ಉನ್ನತ ಮಟ್ಟದ ಸಭೆ ನಡೆಯಲಿದ್ದು, ಈ ಸಂದರ್ಭದಲ್ಲಿ ವರದಿಯ ಆಧಾರದ ಮೇಲೆ, ಜಿಲ್ಲೆಯ ಎಲ್ಲ ತಾಲ್ಲೂಕುಗಳು ಕೂಡ ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರ್ಪಡೆಗೊಳ್ಳುವ ನಿರೀಕ್ಷೆ ಇದೆ ಎಂದರು.

ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ರೈತ ಜ್ಞಾನೇಶ್ ಅವರು ತಮ್ಮ ಬೆಳೆಗೆ ತಾವೇ ಗರಿಷ್ಠ ಮಾರಾಟ ದರವನ್ನು ನಿಗದಿ ಮಾಡಿಕೊಂಡು ಮಾರಾಟ ಮಾಡುತ್ತಾರೆ, ಗುಣಮಟ್ಟಕ್ಕೆ ಆದ್ಯತೆ ನೀಡುವ ಇವರು, ಕೇವಲ 03.5 ಎಕರೆಯಲ್ಲಿ ವರ್ಷಕ್ಕೆ ಖರ್ಚನ್ನು ತೆಗೆದು, ಸುಮಾರು 10 ಲಕ್ಷ ರೂ. ವರೆಗೂ ಲಾಭ ಮಾಡಿಕೊಳ್ಳುತ್ತಿದ್ದಾರೆ, ಇದು ಇತರೆ ರೈತರಿಗೆ ಮಾದರಿಯಾಗಿದೆ ಎಂದರು.

ಚಳ್ಳಕೆರೆ ಶಾಸಕ ರಘುಮೂರ್ತಿ ಅವರು ಮಾತನಾಡಿ, ಸಮಗ್ರ ಕೃಷಿ ತೋಟ ಮಾಡಿ ನಿರಂತರ ಲಾಭ ಗಳಿಸುತ್ತಿರುವ ರೈತ ಜ್ಞಾನೇಶ್ ಅವರ ಸಾಧನೆ ಬಗ್ಗೆ ವ್ಯಾಪಕ ಪ್ರಚಾರ ಆಗಬೇಕು, ರೈತರಿಗೆ ಇದರ ಅರಿವು ಮೂಡಬೇಕು ಎಂದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ., ಕೃಷಿ ನಿರ್ದೇಶಕ ಡಾ. ಜಿ.ಟಿ. ಪುತ್ರ, ಜಂಟಿಕೃಷಿ ನಿರ್ದೇಶಕ ಮಂಜುನಾಥ್, ಗ್ರಾ.ಪಂ. ಅಧ್ಯಕ್ಷೆ ಭಾಗ್ಯಮ್ಮ, ತಹಸಿಲ್ದಾರ್ ನಾಗವೇಣಿ, ಸೇರಿದಂತೆ ವಿವಿಧ ಅಧಿಕಾರಿಗಳು, ರೈತರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ರೈತ ಜ್ಞಾನೇಶ ಅವರ ಸಮಗ್ರ ಕೃಷಿ ತೋಟದಲ್ಲಿ ಸುಮಾರು 45 ನಿಮಿಷಕ್ಕೂ ಅಧಿಕ ಸಮಯ ಕಳೆದ ಕೃಷಿ ಸಚಿವರು, ಇಲ್ಲಿ ನಿಂಬೆ, ಹಲಸು, ಪಪ್ಪಾಯ, ದಾಳಿಂಬೆ, ಕರಿಬೇವು, ನುಗ್ಗೆ, ದಾಳಿಂಬೆ, ಮಾವು, ಬಾಳೆ ಮುಂತಾದ ಬೆಳೆಗಳನ್ನು ಬೆಳೆದಿರುವುದನ್ನು ವೀಕ್ಷಿಸಿ, ಸಮಗ್ರ ಬೇಸಾಯ ಪದ್ಧತಿಯಿಂದ ಆಗುವ ಅನುಕೂಲಗಳ ಬಗ್ಗೆ ಮಾಹಿತಿ ಪಡೆದುಕೊಂಡರು.

## ಕೃಷಿ ಸಚಿವರಿಂದ 35 ರೈತರಿಗೆ ತುಂತುರು ನೀರಾವರಿ ಯಂತ್ರೋಪಕರಣ ವಿತರಣೆ



» ಚಿತ್ರದುರ್ಗ

ಅಟಲ್ ಭೂ ಜಲ ಯೋಜನೆಯಡಿ ಚಿತ್ರದುರ್ಗ ತಾಲ್ಲೂಕಿನ ರೈತರಿಗೆ ತುಂತುರು ನೀರಾವರಿ ಘಟಕದ ಯಂತ್ರೋಪಕರಣಗಳನ್ನು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ನಗರದ ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದ ಬಳಿ ಮಂಗಳವಾರ ವಿತರಣೆ ಮಾಡಿದರು.

ಅಟಲ್ ಭೂ ಜಲ ಯೋಜನೆಯಡಿ ಸಬ್ಸಿಡಿ ಕಾರ್ಯಕ್ರಮದಲ್ಲಿ ತಾಲ್ಲೂಕಿನ 35 ರೈತರಿಗೆ ತುಂತುರು ನೀರಾವರಿ ಘಟಕದಲ್ಲಿ ಸ್ಪ್ರಿಂಕ್ಲರ್ ಗಳು, ಜೆಟ್ ಹಾಗೂ ಪೈಪ್‌ಗಳನ್ನು ವಿತರಿಸಿದರು. ಈ ಸಂದರ್ಭದಲ್ಲಿ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್, ಶಾಸಕರುಗಳಾದ ರಘುಮೂರ್ತಿ, ಕೆ.ಸಿ. ವೀರೇಂದ್ರ ಪಪ್ಪಿ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಕೃಷಿ ನಿರ್ದೇಶಕ ಡಾ. ಜಿ.ಟಿ. ಪುತ್ರ, ಕೃಷಿ ಇಲಾಖೆ ಆಯುಕ್ತ ಬಿ.ವೈ. ಪಾಟೀಲ್ ಮುಂತಾದವರು ಉಪಸ್ಥಿತರಿದ್ದು, ರೈತರಿಗೆ ತುಂತುರು ನೀರಾವರಿ ಯಂತ್ರಗಳನ್ನು ವಿತರಿಸಿದರು.





## ಪ್ರಮುಖ ಸುದ್ದಿ

# ಗೃಹಲಕ್ಷ್ಮಿ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಿ: ಶಾಸಕ

» ಹೊಸದುರ್ಗ




ಸರ್ಕಾರದಮಹತ್ವಾಕಾಂಕ್ಷೆಯೋಜನೆಗಳಲ್ಲಿ ಒಂದಾದ ಗೃಹಲಕ್ಷ್ಮಿ ಯೋಜನೆಯನ್ನು ಮುಖ್ಯಮಂತ್ರಿಗಳು ಮೈಸೂರಿನಲ್ಲಿ ರಾಜ್ಯ ಮಟ್ಟದ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು ಈ ಹಿನ್ನೆಲೆಯಲ್ಲಿ ಮನೆ ಯಜಮಾನಿಗೆ ರೂ.2000 ನೇರ ವರ್ಗಾವಣೆ ಮಾಡುವ ಕಾರ್ಯಕ್ರಮವನ್ನು ಹೊಸದುರ್ಗ ಪಟ್ಟಣದಲ್ಲೂ ಸಹಾ ಗೃಹ ಲಕ್ಷ್ಮಿ ಯೋಜನೆ ಕಾರ್ಯಕ್ರಮವನ್ನ ಯಶಸ್ವಿಯಾಗಿ ನಡೆಸಬೇಕು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಅಧಿಕಾರಿಗಳಿಗೆ ಕರೆ ನೀಡಿದರ

ಪಟ್ಟಣದ ರಾಧಾ ಕೃಷ್ಣ ಕಲ್ಯಾಣ ಮಂಟಪದಲ್ಲಿ ಕರೆಯಲಾಗಿದ್ದ ಪೂರ್ವ ಬಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರ್ಕಾರ ಐದು ಗ್ಯಾರೆಂಟಿಗಳನ್ನು ಪ್ರಣಾಳಿಕೆಯಲ್ಲಿ ನೀಡಿತ್ತು. ಅದರಂತೆ ಮೂರು ಗ್ಯಾರೆಂಟಿಗಳು ಜಾರಿಗೊಳಿಸಿ ಜನರಿಗೆ ತಲುಪಿದೆ. ಅದರಂತೆ ಮತ್ತೊಂದು ಗ್ಯಾರೆಂಟಿಯಾದ ಗೃಹಲಕ್ಷ್ಮಿ ಯೋಜನೆಯನ್ನು ಹೊಸದುರ್ಗದಲ್ಲಿ ಆಯೋಜಿಸಲಾಗಿದ್ದು 30 ರಂದು ಚಾಲನೆ ನೀಡಲಾಗುತ್ತದೆ. ಇದಕ್ಕೆ ಅಧಿಕಾರಿಗಳು ಅಗತ್ಯ ಸಿದ್ದತೆ ಮಾಡಿಕೊಳ್ಳಿ ಎಂದು ಸೂಚಿಸಿದ್ದೇನೆ ಎಂದು ತಿಳಿಸಿದರು.

ಪುರಸಭೆ ಮುಖ್ಯಾಧಿಕಾರಿ ಜಿ.ವಿ. ತಿಮ್ಮರಾಜು ಮಾತನಾಡಿ ಪುರಸಭೆ ಆಡಳಿತಾಧಿಕಾರಿ ಹಾಗೂ ಚಿತ್ರದುರ್ಗ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ರವರ ಸಲಹೆ ಪಡೆದು ಸರ್ಕಾರದ ಸುತ್ತೋಲೆಯಂತೆ ವೇದಿಕೆ, ಎಲ್‌ಇಡಿ ಸ್ಕ್ರೀನ್ , ಶಾಮಿಯಾನ, ಆಸನ, ಉಪಹಾರ, ಆಹ್ವಾನ ಪತ್ರಿಕೆ ಮುದ್ರಣ, ಬ್ಯಾನರ್/ಹೋರ್ಡಿಂಗ್ಸ್ ವ್ಯವಸ್ಥೆಯನ್ನು ಪುರಸಭೆ ವೆಚ್ಚದಲ್ಲಿ ಮಾಡಿಕೊಳ್ಳಲಾಗಿದ್ದು ಎಲ್ಲಾ ಪುರಸಭಾ ಸದಸ್ಯರು ಮತ್ತು ಗಣ್ಯ ವ್ಯಕ್ತಿಗಳನ್ನು ಆಹ್ವಾನಿಸಲು ಕ್ರಮ ಕೈಗೊಳ್ಳಲಾಗಿರುವ ಅಂಶವನ್ನು ಗೃಹಲಕ್ಷ್ಮಿ ಕಾರ್ಯಕ್ರಮಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಆಶಾ ಮತ್ತು ಅಂಗನವಾಡಿ ಕಾರ್ಯಕರ್ತರನ್ನು ನಿಯೋಜಿಸಿ ಫಲಾನುಭವಿಗಳನ್ನು ವೇದಿಕೆಗೆ ಕರೆತರಲು ಹಾಗೂ 80 ವರ್ಷ ಮೇಲ್ಪಟ್ಟ ಫಲನುಭವಿಗಳನ್ನು ಗುರುತಿಸಿ ಪ್ರತ್ಯೇಕವಾಗಿ ಕರೆತರಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ವಿವರಣೆ ನೀಡಿದರು.

ಸಿಡಿಪಿಓ ಅಭಿಲಾಶ ಮಾತನಾಡಿ ಕಾರ್ಯಕ್ರಮಗಳಿಗೆ ಯಾವುದೇ ಲೋಪವಾಗದಂತೆ ನೋಡಲ್ ಅಧಿಕಾರಿಯಾಗಿ ಕಾರ್ಯ ನಿರ್ವಹಿಸಲಾಗುವುದು ಎಂದರು. ಈ ಸಂದರ್ಭದಲ್ಲಿತಾಲ್ಲೂಕುಪಂಚಾಯಿತಿ ಇಓ ಸುನೀಲ್ ಕುಮಾರ್, ಕ್ಷೇತ್ರ ಶಿಕ್ಷಣಾಧಿಕಾರಿ ಮೋಸಿನ್, ಪುರಸಭೆ ಕಂದಾಯ ನಿರೀಕ್ಷಕ ಕುಮಾರ್.ಜಿ.ಎನ್ ಆರೋಗ್ಯ ನಿರೀಕ್ಷಕಿ ಕಲ್ಪನ.ಟಿ ಸಿಬ್ಬಂದಿಗಳಾದ ವಿಕಾಸ್.ಹೆಚ್, ಕುಮಾರ.ಟಿ ಹಾಜರಿದ್ದರು.

ಸಭೆಯ ನಂತರ ಪಟ್ಟಣದ ವ್ಯಾಪ್ತಿಯಲ್ಲಿ ಬರುವ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನ ಆವರಣದಲ್ಲಿ ಕಾರ್ಯಕ್ರಮವನ್ನ ಆಯೋಜಿಸುವ ಸಲುವಾಗಿ ತಹಶೀಲ್ದಾರ್ ಪಟ್ಟರಾಜ ಗೌಡರು ಸ್ಥಳಕ್ಕೆ ಬೇಟಿ ನೀಡಿ ಪರಿಶೀಲಿಸಿ ಆಗಸ್ಟ್ 30 ರಂದು ನಡೆಯಲಿರುವ ಕಾರ್ಯಕ್ರಮಕ್ಕೆ ಸ್ಥಳ ವೀಕ್ಷಣೆ ಮಾಡಿದರು.

## ಫಾಸ್ಟ್ ನ್ಯೂಸ್

### ಅನುಮಾಸ್ಪದವಾಗಿ ಮೃತ ಪಟ್ಟ ಹುಲಿ

ಚಾಮರಾಜನಗರ: ಜಿಲ್ಲೆಯ ಬಿ.ಆರ್.ಟಿ ಹುಲಿಸಂರಕ್ಷಿತ ಅರಣ್ಯ ಪ್ರದೇಶದಲ್ಲಿ ಅನುಮಾಸ್ಪದವಾಗಿ ಹುಲಿಯೊಂದು ಮೃತ ಪಟ್ಟ ಘಟನೆ ನಡೆದಿದೆ. ಅರಣ್ಯಾಧಿಕಾರಿಗಳು ಇಂದು ಬಿ.ಆರ್.ಟಿ ಹುಲಿಸಂರಕ್ಷಿತ ಪ್ರದೇಶ ಅತ್ತಿಕಾನೆ ಬಳಿ ರೌಂಡ್ಸ್ ಗೆ ತೆರಳಿದಾಗ ಘಟನೆ ಬೆಳಕಿಗೆ ಬಂದಿದೆ.


### ಇಂದ್ರಜಿತ್ ಲಂಕೇಶ್ ಪುತ್ರನ ಮೊದಲ ಸಿನಿಮಾ ಹೆಸರು 'ಗೌರಿ'; ಮುಹೂರ್ತಕ್ಕೆ ಸಿದ್ದರಾಮಯ್ಯ ಅತಿಥಿ

ಗೌರಿ' ಸಿನಿಮಾ ಸಲುವಾಗಿ ಸಮರ್ಜಿತ್ ಲಂಕೇಶ್ ಅವರು ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ಆಗಸ್ಟ್ 31ರಂದು ಬೆಂಗಳೂರಿನ ದೊಡ್ಡ ಗಣಪತಿ ದೇವಸ್ಥಾನದಲ್ಲಿ ಈ ಚಿತ್ರದ ಮುಹೂರ್ತ ಸಮಾರಂಭ ನಡೆಯಲಿದೆ. 'ಗೌರಿ' ಎಂದು ಶೀರ್ಷಿಕೆ ಇಟ್ಟಿರುವುದು ಯಾಕೆ ಎಂಬ ಪ್ರಶ್ನೆಗೆ ಮುಹೂರ್ತದ ವೇಳೆ ಇಂದ್ರಜಿತ್ ಲಂಕೇಶ್ ಅವರಿಂದ ಉತ್ತರ ಸಿಗುವ ನಿರೀಕ್ಷೆ ಇದೆ. ಪಿ. ಲಂಕೇಶ್ ಅವರ ಕುಟುಂಬ ಪತ್ರಿಕೋದ್ಯಮ ಮತ್ತು ಸಿನಿಮಾ ರಂಗದಲ್ಲಿ ತೊಡಗಿಕೊಂಡಿದೆ. ಇಂದ್ರಜಿತ್ ಲಂಕೇಶ್ ಅವರು ನಿರ್ದೇಶಕನಾಗಿ ಹೆಸರು ಮಾಡಿದ್ದಾರೆ. ಈಗ ಅವರ ಪುತ್ರ ಸಮರ್ಜಿತ್ ಲಂಕೇಶ್ ಅವರು ಹೀರೋ ಆಗಿ ಚಿತ್ರರಂಗಕ್ಕೆ ಕಾಲಿಡುತ್ತಿದ್ದಾರೆ. ಅವರ ಮೊದಲ ಸಿನಿಮಾ ಸೆಟ್ಟೇರಲು ದಿನಾಂಕ ನಿಗದಿ ಆಗಿದೆ. ವಿಶೇಷ ಏನೆಂದರೆ, ಈ ಸಿನಿಮಾಗೆ 'ಗೌರಿ' ಎಂದು ಶೀರ್ಷಿಕೆ ಇಡಲಾಗಿದೆ. ಅಲ್ಲದೇ, ಇದು ನೈಜ ಘಟನೆಗಳಿಂದ ಸ್ಫೂರ್ತಿ ಪಡೆದ ಸಿನಿಮಾ ಎಂಬುದು ಗಮನಿಸಬೇಕಾದ ಅಂಶ. ಈ ಎಲ್ಲ ಕಾರಣಗಳಿಂದಾಗಿ 'ಗೌರಿ' ಸಿನಿಮಾ (ಉಚಿಣಡು ಒಂತುಜ) ಮೇಲೆ ಕೌತುಕ ನಿರ್ಮಾಣ ಆಗಿದೆ. ಈ ಸಿನಿಮಾದ ಮುಹೂರ್ತ ಸಮಾರಂಭ ಆಗಸ್ಟ್ 31ರಂದು ನಡೆಯಲಿದೆ. ಆ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯ ಅತಿಥಿಯಾಗಿ ಆಗಮಿಸಲಿದ್ದಾರೆ. ಗೌರಿ' ಸಿನಿಮಾ ಸಲುವಾಗಿ ಸಮರ್ಜಿತ್ ಲಂಕೇಶ್ ಅವರು ಸಾಕಷ್ಟು ತಯಾರಿ ಮಾಡಿಕೊಂಡಿದ್ದಾರೆ. ಸಿಕ್ಸ್ ಪ್ಯಾಕ್ □□□ಬ್ಸ್ ಮೂಲಕ ಅವರು ಗಮನ ಸೆಳೆಯುತ್ತಿದ್ದಾರೆ. ಅವರ ಫೋಟೋಗಳು ಈಗಾಗಲೇ ಹೈಲೈಟ್ ಆಗಿವೆ. ಸಿನಿಮಾದ ಬಗ್ಗೆ ಹೆಚ್ಚಿನ ಮಾಹಿತಿ ತಿಳಿಯುವ ಕುತೂಹಲ ನಿರ್ಮಾಣ ಆಗಿದೆ. ಬೆಂಗಳೂರಿನ ದೊಡ್ಡ ಗಣಪತಿ ದೇವಸ್ಥಾನದಲ್ಲಿ ಆಗಸ್ಟ್ 31ರಂದು ಬೆಳಗ್ಗೆ 10 ಗಂಟೆಗೆ 'ಗೌರಿ' ಸಿನಿಮಾದ ಮುಹೂರ್ತ ನೆರವೇರಲಿದೆ.

# ಹೆಚ್ಚುವರಿ ಬ್ಯಾರೇಜ್ ನಿರ್ಮಿಸಲು ಆರ್ಥಿಕ ನೆರವಿಗೆ ಸಚಿವರಿಗೆ ಮನವಿ ಮಾಡಿದ ಶಾಸಕ ಟಿ.ರಘುಮೂರ್ತಿ

» **ಚಳ್ಳಕೆರೆ**





ಚಳ್ಳಕೆರೆ ತಾಲ್ಲೂಕು ಸೇರಿದಂತೆ ರಾಜ್ಯದ ಹಲವಾರು ಜಿಲ್ಲೆಗಳು ಮಳೆಯ ಅಭಾವವನ್ನು ಎದುರಿಸುತ್ತಿದ್ದು, ಬರಪೀಡಿತ ಪ್ರದೇಶಗಳಾಗಿವೆ. ಪ್ರಸ್ತುತ ರಾಜ್ಯದಲ್ಲಿ ಜಾರಿ ಇರುವ ಫಸಲ್ ಬೀಮಾ ಯೋಜನೆ ಅವೈಜ್ಞಾನಿಕತೆಯಿಂದ ಕೂಡಿದೆ ಎಂಬ ಆರೋಪ ಮಾಡಿದ್ದೀರಿ, ಈ ಯೋಜನೆಯಡಿ ರಾಜ್ಯದ ರೈತರು 40 ಕೋಟಿ ಪಾವತಿಸಿದರೆ 2400 ಕೋಟಿ ಹಣವನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನೀಡಲಿದ್ದು ಇದರ ಸದುಪಯೋಗವನ್ನು ರಾಜ್ಯ ರೈತರು ಪಡೆಯಲು ಮುಂದಾಗಬೇಕೆಂದು ರಾಜ್ಯ ಕೃಷಿ ಸಚಿವ ಚಲುವರಾಯಸ್ವಾಮಿ ತಿಳಿಸಿದರು.

ಮಂಗಳವಾರ ಚಳ್ಳಕೆರೆ ವಿಧಾನಸಭಾ ವ್ಯಾಪ್ತಿಯ ಚೌಳೂರು ಬ್ಯಾರೇಜ್, ಜುಂಜರಗುಂಟೆ ಗ್ರಾಮದಲ್ಲಿ ಒಣಗಿದ ಶೇಂಗಾ ಬೆಳೆಯನ್ನು ವೀಕ್ಷಿಸಿದರು. ರಾಜ್ಯದಲ್ಲಿ ರೈತರು ಸಾಲ ಮನ್ನಾ ಮಾಡಬೇಕೆಂದು ಒತ್ತಾಯಿಸುತ್ತಾರೆ. ಅದು ಗ್ರಾಮದ ನಾಲ್ಕೈದು ಜನರಿಗೆ ಅನುಕೂಲವಾಗುತ್ತದೆ. ಆದರೆ ಸರ್ಕಾರ ರಾಜ್ಯದ ಜನರಿಗೆ ಐದು ಗ್ಯಾರಂಟಿಗಳ ಮೂಲಕ ಎಲ್ಲಾ ರೀತಿಯ ಅನುಕೂಲತೆ ಮಾಡುತ್ತಿದೆ. ಈ ಭಾಗದಲ್ಲಿ ಶಾಸಕರ ಕೋರಿಕೆಯಂತೆ ಹೆಚ್ಚುವರಿ ಬ್ಯಾರೇಜ್ ನಿರ್ಮಾಣಕ್ಕೆ ಮುಖ್ಯಮಂತ್ರಿಗಳೊಂ ದಿಗೆ ಚರ್ಚಿಸುವ ಭರವಸೆ ನೀಡಿದರು.

ರೈತರು ವಿಚಲಿತರಾಗದೆ ಸರ್ಕಾರದ ಹಲವಾರು ಯೋಜನೆಗಳ ಸದುಪಯೋಗ ಪಡೆದು ಆರ್ಥಿಕ ಅಭಿವೃದ್ಧಿ ಹೊಂದಬೇಕು.

ರಾಜ್ಯ ಸರ್ಕಾರದ ಮಹತ್ವದ ಯೋಜನೆಯಾದ ಗೃಹಲಕ್ಷ್ಮಿ ಮೈಸೂರಿನಲ್ಲಿ ಜಾರಿಯಾಗಲಿದ್ದು, ರಾಜ್ಯದ ಸರ್ಕಾರ ಶತದಿನಗಳ ಉತ್ತಮ ಆಡಳಿತ ಜನರಿಗೆ ನೀಡಿದೆ. ಮುಂಬರುವ ದಿನಗಳಲ್ಲಿ ರೈತರಿಗೆ ಹೆಚ್ಚಿನ ಅನುಕೂಲತೆಗಳನ್ನು ಕಲ್ಪಿಸುವ ಭರವಸೆ ನೀಡಿದರು.

ಇದೇ ಸಂದರ್ಭದಲ್ಲಿ ಜುಂಜರಗುಂಟೆ ಗ್ರಾಮದ ಜಯಮ್ಮ ಎಂಬ ಮಹಿಳೆಯ ಜಮೀನಲ್ಲಿ ಶೇಂಗಾ ಬೆಳೆ ಒಣಗಿ ಲಕ್ಷಾಂತರ ರೂ ನಷ್ಟವಾಗಿದೆ ಎಂದು ಕಣ್ಣೀರು ಹಾಕಿದಾಗ ಸಮಧಾನಪಡಿಸಿದ ಸಚಿವರು ತಮ್ಮ ವೈಯುಕ್ತಿಕವಾಗಿ 25 ಸಾವಿರ ಆರ್ಥಿಕ ನೆರವು ನೀಡಿದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಕಳೆದ 2018-19ರ ಆಯವ್ಯಯದಲ್ಲಿ ಜಿಲ್ಲೆಗೆ ಅಂದಿನ ಸರ್ಕಾರ 50 ಕೋಟಿ ಅನುದಾನವನ್ನು ಕೃಷಿ ಚಟುವಟಿಕೆಗೆ ನೀಡಿತ್ತು. ಈ ಭಾಗದ ರೈತರು ಹೆಚ್ಚು ನಷ್ಟದಲ್ಲಿದ್ದು, ಪ್ರಸ್ತುತ 2023-24ರ ಆಯವ್ಯಯದಲ್ಲೂ ಸಹ 50 ಕೋಟಿ ಅನುದಾನ ನಮ್ಮ ಜಿಲ್ಲೆಗೆ ನೀಡಬೇಕೆಂದು ಮನವಿ ಮಾಡಿದರು. ಕ್ಷೇತ್ರದ ಇನ್ನೂ ಕೆಲವೆಡೆ ಹೆಚ್ಚುವರಿ ಬ್ಯಾರೇಜ್ ನಿರ್ಮಿಸಲು ಆರ್ಥಿಕ ನೆರವು ನೀಡಬೇಕು, ಖಾಸಗಿ ಕಂಪನಿಗಳ ಬೆಳೆ ವಿಮೆ ಹಣ ಪಾವತಿ ಬಗ್ಗೆ ರೈತರಿಗೆ ಅನ್ಯಾಯವಾಗಿದ್ದು ಈ ಬಗ್ಗೆ ಕ್ರಮ ವಹಿಸಬೇಕು. ಸಾಣಿಕೆರೆ ಗ್ರಾಮದಲ್ಲಿ 92 ಎಕರೆ ಪ್ರದೇಶದಲ್ಲಿ ಒಣ ಬೇಸಾಯ ಕೃಷಿ ಸಂಶೋಧನಾ ಕೇಂದ್ರವನ್ನು ಆರಂಭಿಸಬೇಕೆಂದು ಒತ್ತಾಯಿಸಿದರು.

ರೈತ ಮುಖಂಡರಾದ ಚಿಕ್ಕಣ್ಣ, ಪ್ರಕಾಶ್, ದೇವರಾಜು ಮುಂತಾದವರು ಮಾತನಾಡಿ, ಶಾಸಕರಾದ ಟಿ.ರಘುಮೂರ್ತಿ ಅವರ ಶ್ರಮದಿಂದ ನಾಲ್ಕು ಕಡೆ ಬ್ಯಾರೇಜ್ ನಿರ್ಮಾಣವಾದ ಹಿನ್ನೆಲೆಯಲ್ಲಿ ಈ ಭಾಗದ ಸಾವಿರಾರು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಕಲ್ಪಿಸಿದೆ. ಬಹುತೇಕ ಕೃಷಿ ಭೂಮಿ ನೀರಾವರಿಯಾಗಿ ಪರಿವರ್ತನೆಯಾಗಿದೆ. ಬಾಕಿ ಉಳಿದ ಪ್ರದೇಶದಲ್ಲಿ ಬ್ಯಾರೇಜ್ ನಿರ್ಮಾಣಕ್ಕೆ ಅವಕಾಶ ಕಲ್ಪಿಸಿಕೊಡಬೇಕು. ರೈತರ ಲಕ್ಷಾಂತರ ರೂ ಬೆಳೆನಷ್ಟ ಪರಿಹಾರ ಹಣ ಬಾಕಿ ಇದ್ದು ಅದನ್ನು ಪಾವತಿಸಬೇಕು ಎಂದರು.

ಚಿತ್ರದುರ್ಗ ಶಾಸಕ ವೀರೇಂದ್ರ ಕೃಷಿ ಆಯುಕ್ತ ಎಸ್.ವೈ.ಪಾಟೀಲ್, ವಾಟರ್‌ಶೆಡ್ ಆಯುಕ್ತ ಗಿರೀಶ್, ಜೆಡಿ ಎನ್.ಮಂಜುನಾಥ, ಡಿಡಿ ಶಿವಕುಮಾರ್, ಪ್ರಭಾಕರ್, ಎಡಿಎ ಅಶೋಕ್, ಜೀವನ್, ಡಿವೈಎಸ್ಪಿ ರಾಜಣ್ಣ, ಸಿಪಿಐ ಸಮೀವುಲ್ಲಾ, ಪಿಎಸ್‌ಐ ಎಂ.ಕೆ.ಬಸವರಾಜು, ಕಾಂಗ್ರೆಸ್ ಮುಖಂಡರಾದ ಎಸ್. ಚನ್ನಕೇಶವ, ಆರ್.ಪ್ರಸನ್ನಕುಮಾರ್, ಜೆ.ತಿಪ್ಪೇಸ್ವಾಮಿ, ಎಂ.ಚೇತನ್‌ಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕಾವ್ಯವಿಜಯಕುಮಾರ್, ಶಿವಲಿಂಗಪ್ಪ, ಗುಜ್ಜಾರಪ್ಪ, ದೊಡ್ಡ ಉಳ್ಳಾರ್ತಿ ಕರಿಯಣ್ಣ ಮುಂತಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಕ್ರೀಡೆಯಿಂದ ದೈಹಿಕ, ಮಾನಸಿಕವಾಗಿ ಸದೃಢರಾಗಬಹುದು



» **ದಾವಣಗೆರೆ**

ಪಾಠದ ಜೊತೆ ಕ್ರೀಡೆಗಳಲ್ಲೂ ವಿದ್ಯಾರ್ಥಿಗಳು ಹೆಚ್ಚು ಆಸಕ್ತಿ ಹೊಂದಬೇಕು, ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕವಾಗಿ ಸದೃಢವಾಗಬಹುದೆಂದು ಪ್ರಾಚಾರ್ಯರಾದ ಶ್ರೀಮತಿ ಪ್ರಭಾವತಿ ಅವರು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ನಗರದ ನಿಟ್ಟುವಳ್ಳಿ ರಸ್ತೆಯಲ್ಲಿರುವ ಶ್ರೀ ಸೋಮೇಶ್ವರ ವಿದ್ಯಾಲಯದಲ್ಲಿ ಇಂದು ರಾಷ್ಟ್ರೀಯ ಕ್ರೀಡಾದಿನಾಚರಣೆ ಮಾಡಲಾಗಿದ್ದು, ಈ ವೇಳೆ ವಿದ್ಯಾರ್ಥಿಗಳಿಗೆ ಕ್ರೀಡೆ ಬಗ್ಗೆ ಆಸಕ್ತಿ ಹೊಂದುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು. ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಕ್ರೀಡೆಯಲ್ಲಿ ಸಾಧನೆ ಮಾಡಿ ಕೀರ್ತಿ ತರಬೇಕೆಂದು ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿದರು. ಇದೇವೇಳೆ ಕ್ಲಸ್ಟರ್ ಮಟ್ಟದಲ್ಲಿ 23 ಬಹುಮಾನ ಪಡೆದು, ತಾಲ್ಲೂಕ್ ಮಟ್ಟಕ್ಕೆ ಆಯ್ಕೆಯಾದ 22 ವಿದ್ಯಾರ್ಥಿಗಳು, ಜಿಲ್ಲಾ ಮಟ್ಟಕ್ಕೆ ಆಯ್ಕೆಯಾದ 9 ವಿದ್ಯಾರ್ಥಿಗಳಿಗೆ ಪ್ರಾಚಾರ್ಯರಾದ ಶ್ರೀಮತಿ ಪ್ರಭಾವತಿ ಅವರು ಬಹುಮಾನ ನೀಡಿ ಅಭಿನಂದನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಾಲೆಯ ಆಡಳಿತ ಮಂಡಳಿ ಹರೀಶ್ ಬಾಬು , ಮುಖ್ಯೋಪಧ್ಯಾರಾದ ಶ್ರೀಮತಿ ಮಾಲಾ, ಶ್ರೀಮತಿ ಗಾಯತ್ರಿ ಹಾಗೂ ಪ್ರಕಾಶ್, ದೈಹಿಕ ಶಿಕ್ಷಣ ವಿಭಾಗದ ನಾಗರಾಜ್, ರಾಹುಲ್, ಶ್ರೀಮತಿ ಇಂದ್ರಮ್ಮ ಉಪಸ್ಥಿತರಿದ್ದರು.

## ಹೊಸದುರ್ಗ ಪೌರಕಾರ್ಮಿಕರಿಗೆ ಗೋವಾ ಅಧ್ಯಾಯನ ಪ್ರವಾಸ




» **ಹೊಸದುರ್ಗ**

ಪಟ್ಟಣದ ಪುರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಅಮೃತ್ ನಿರ್ಮಲ ನಗರ ಯೋಜನೆಯಡಿ ಸ್ವಚ್ಛಭಾರತ್ ಚಟುವಟಿಕೆಗಳ ಬಗ್ಗೆ ಹೆಚ್ಚಿನ ತರಬೇತಿ ಹಾಗೂ ಕ್ಷೇತ್ರ ಅಧ್ಯಯನ ಪ್ರವಾಸವನ್ನು ಗೋವಾ ರಾಜ್ಯದ ಮಹಾನಗರ ಪಾಲಿಕೆಯಲ್ಲಿ ಕೈಗೊಳ್ಳಲು ಪುರಸಭಾ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ.ಚಾಲನೆ ನೀಡಿದರು.ಪ್ರವಾಸ ಹೋಗಿದ್ದ ಪೌರಕಾರ್ಮಿಕರು ಗೋವಾ ರಾಜ್ಯದ ಮಹಾನಗರಪಾಲಿಕೆ ಕಛೇರಿಗೆ ಭೇಟಿ ನೀಡಿ, ಅಲ್ಲಿನ ಸಿಬ್ಬಂದಿ ವರ್ಗದವರೊಂದಿಗೆ ಹಸಿ ಕಸ ಒಣ ಕಸ ವಿಂಗಡನೆ ಹಾಗೂ ಸ್ವಚ್ಛತೆ ಬಗ್ಗೆ ಉನ್ನತ ಅಧ್ಯಯನ ತರಬೇತಿ ಕಾರ್ಯಾಗಾರವನ್ನು ವೀಕ್ಷಿಸಿದರು. ಹಾಗೂ ಅಲ್ಲಿ ನಡೆದ ಕಾರ್ಯಗಾರದಲ್ಲಿ ಭಾಗಿಯಾಗಿ ಪ್ರಶಸ್ತಿ ಪತ್ರಗಳನ್ನು ಪಡೆದರು. ಈ ಸಂಧರ್ಬದಲ್ಲಿ ಜಿ.ಜಿ.ವಿ. ಸರ್ಕಾರೇತರ ಸಂಸ್ಥೆಯ ಅಧ್ಯಕ್ಷ ದಯಾನಂದಮೂರ್ತಿ ಕೆ.ಆರ್ ಮತ್ತು ಮೋಹನ್‌ಕುಮಾರ್ ಹಾಗೂ ಹೊಸದುರ್ಗ ಪುರಸಭಾ ಆರೋಗ್ಯ ನಿರೀಕ್ಷಕ ಪ್ರದೀಪ್ ಭಾಗವಹಿಸಿದ್ದರು ಇದೇ ಸಂಧರ್ಬದಲ್ಲಿ ಪೌರಕಾರ್ಮಿಕರು ಹಾಗೂ ಸ್ವಚ್ಛತೆಗಾರರಿಗೆ ಪ್ರಶಸ್ತಿ ವಿತರಣೆ ಮಾಡಲಾಯಿತು.

## ಮೈಸೂರಿನಲ್ಲಿ 2 ಜಿಲ್ಲೆಗಳ ಕಾಂಗ್ರೆಸ್ ಶಾಸಕರ ಜೊತೆ ಸಿಎಂ ಸಭೆ


ಮೈಸೂರು: ಮೈಸೂರಿನ ಟಿ.ಕೆ.ಲೇಔಟ್‌ನಲ್ಲಿರುವ ಸಿಎಂ ನಿವಾಸದಲ್ಲಿ ಚಾಮರಾಜನಗರ ಹಾಗೂ ಮೈಸೂರು ಜಿಲ್ಲೆಯ ಕಾಂಗ್ರೆಸ್ ಶಾಸಕರ ಜೊತೆ ಸಿಎಂ ಸಭೆ ನಡೆಸಿದ್ದಾರೆ.

# ನೇತ್ರದಾನ ಮಾಡಿ ಜೀವನ ಸಾರ್ಥಕ ಪಡಿಸಿಕೊಳ್ಳಿ: ಡಾ.ಮೇಘನಾ

» **ಚಿತ್ರದುರ್ಗ**

ನೇತ್ರದಾನ ಮಾಡಿ ಜೀವನ ಸಾರ್ಥಕ ಪಡಿಸಿಕೊಳ್ಳಬೇಕು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಮೇಘನಾ ಸಲಹೆ ನೀಡಿದರು.

ಚಿತ್ರದುರ್ಗ ತಾಲ್ಲೂಕಿನ ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಗೋನೂರು ನಿರಾಶ್ರಿತರ ಕೇಂದ್ರದಲ್ಲಿ ಆರೋಗ್ಯ ಇಲಾಖೆ, ಜಿಲ್ಲಾ ಆಸ್ಪತ್ರೆ ಸಹಯೋಗದೊಂದಿಗೆ ಮಂಗಳವಾರ ಹಮ್ಮಿಕೊಂಡಿದ್ದ 38ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಎಲ್ಲರೂ ಜೀವನ ಸಾರ್ಥಕತೆ ಪಡಿಸಿಕೊಳ್ಳಲು ಏನನ್ನಾದರೂ ಮಾಡಬೇಕು ಎಂದು ಆಲೋಚಿಸುತ್ತಿರುತ್ತಾರೆ. ಅದರಂತೆ ನೇತ್ರದಾನ ಹೇಗೆ ಮಾಡಬೇಕು ಯಾವ ದಾಖಲಾತಿಗಳನ್ನು ನೀಡಬೇಕು. ಎಲ್ಲಿ ಮಾಡಬೇಕು ಎಂಬುದರ ಬಗ್ಗೆ ಮಾಹಿತಿ ಕೊರತೆ ಇರುತ್ತದೆ. ಈ ಮಾಹಿತಿ ನೀಡಲು, ನೇತ್ರದಾನದ ಮಹತ್ವ ಸಾರುವುದಕ್ಕಾಗಿ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಸ್ಪತ್ರೆಯ ನೇತ್ರಾಧಿಕಾರಿಗಳು ಆನ್‌ಲೈನ್ ಮೂಲಕ ತಮ್ಮ ಹೆಸರುಗಳನ್ನು ನೇತ್ರದಾನಕ್ಕೆ ನೋಂದಾಯಿಸಲಿದ್ದಾರೆ. ನಿರಾಶ್ರಿತ ಕೇಂದ್ರದ ಸಿಬ್ಬಂದಿಗಳು ಆಸಕ್ತ ಫಲಾನುಭವಿಗಳು ಇದರ ಉಪಯೋಗ ಪಡೆದುಕೊಳ್ಳಿ ಎಂದು ಹೇಳಿದರು.

ಜಿಲ್ಲಾಸ್ಪತ್ರೆಯ ಜಿಲ್ಲಾ ನೇತ್ರ ತಜ್ಞರಾದ ಡಾ.ಪ್ರದೀಪ್ ಮಾತನಾಡಿ, ಒಬ್ಬ ವ್ಯಕ್ತಿ ದಾನ ಮಾಡಿದ ನೇತ್ರಗಳು ಇಬ್ಬರು ಕಾರ್ನಿಯಾ ಅಂದರಿಗೆ ದೃಷ್ಟಿ ನೀಡುತ್ತದೆ. ಅಂದಾಜು ಒಂದು ಕೋಟಿ ಇಪ್ಪತ್ತೈದು ಲಕ್ಷ ಜನರು ಕಾರ್ನಿಯಾ ಸಂಬಂಧಿ ಅಂದತ್ವದಿಂದ ಬಳಲುತ್ತಿದ್ದು, ದಾನಕ್ಕಾಗಿ ಕಾಯುತ್ತಿದ್ದಾರೆ. ಹೆಚ್ಚು ಹೆಚ್ಚು ನೇತ್ರದಾನ ಮಾಡಿ ಅಂದರ ಬಾಳಿಗೆ ಬೆಳಕಾಗಿ ಎಂದರು.

ಕಾರ್ಯಕ್ರಮದಲ್ಲಿತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿಎನ್.ಎಸ್.ಮಂಜುನಾಥ್, ಜಿಲ್ಲಾಸ್ಪತ್ರೆಯ ನೇತ್ರಾಧಿಕಾರಿ ಕೆ.ರಾಮು, ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ಶಾಸಕ ಚಂದ್ರಪ್ಪ ಜನಸೇವೆಯನ್ನು ಉಸಿರಾಗಿಸಿಕೊಂಡಿದ್ದಾರೆ: ಸ್ವಾಮೀಜಿ

» **ಚಿತ್ರದುರ್ಗ**

ಹಣ ನೀಡಿ ಡಾಕ್ಟರೇಟ್ ಪದವಿ ಪಡೆಯುವವರೆ ಹೆಚ್ಚು ಮಂದಿಯಿರುವ ಇಂದಿನ ಕಾಲದಲ್ಲಿ ಹೊಳಲ್ಕೆರೆ ಶಾಸಕ ಎಂ.ಚಂದ್ರಪ್ಪ ಕ್ಷೇತ್ರದ ಅಭಿವೃದ್ಧಿ ಮೂಲಕ ಜನಸೇವೆಯನ್ನೆ ಉಸಿರಾಗಿಸಿಕೊಂಡು ಕುವೆಂಪು ವಿಶ್ವವಿದ್ಯಾಲಯದಿಂದ ಗೌರವ ಡಾಕ್ಟರೇಟ್ ಪಡೆದುಕೊಂಡಿದ್ದಾರೆ ಎಂದು ಸಾಣೆಹಳ್ಳಿಯ ಡಾ. ಪಂಡಿತಾರಾಧ್ಯ ಶಿವಕುಮಾರ ಸ್ವಾಮಿಗಳು ಹೇಳಿದರು.

ದೇವರಾಜ್‌ಅರಸ್ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರಿಂದ ತ.ರಾ.ಸು.ರಂಗಮಂದಿರದಲ್ಲಿ ಶಾಸಕಡಾ.ಎಂ.ಚಂದ್ರಪ್ಪನವರಿಗೆಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಗೌರವ ಸಮರ್ಪಣಾ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಯಾವುದೇ ವ್ಯಕ್ತಿ ಹುಟ್ಟುವಾಗಲೆ ಬಾಯಲ್ಲಿ ಚಿನ್ನದ ಚಮಚ ಇಟ್ಟುಕೊಂಡು ಬರುವುದಿಲ್ಲ. ಬಡತನದ ಬೇಗೆಯನ್ನು ಎದುರಿಸಿ ಬೆಳೆದವರು ಮಾತ್ರ ಅದ್ಭುತ ಸಾಧನೆ ಮಾಡುತ್ತಾರೆ. ಆ ಸಾಲಿನಲ್ಲಿ ಶಾಸಕ ಡಾ.ಎಂ. ಚಂದ್ರಪ್ಪ ಸೇರುತ್ತಾರೆ. ಮುದ್ದಿನಿಂದ ಬೆಳೆಸಿದ ತಂದೆ-ತಾಯಿಗಳನ್ನು ನಿರ್ಲಕ್ಷಿಸುವ ಮಕ್ಕಳು ಹೆಚ್ಚಾಗಿರುವ ಈ ಸಂದರ್ಭದಲ್ಲಿ ಶಾಸಕರ ಪುತ್ರ ರಘುಚಂದ□□ ಅವರಲ್ಲಿ ಗುರುಭಕ್ತಿ, ಶ್ರದ್ದೆ, ಗೌರವ, ಜನಪರ ಕಾಳಜಿಯಿರುವುದು ಸಂತಸ ತಂದಿದೆ ಎಂದರು.

ವಿದ್ಯಾವಂತರಾಗಿ ಶ್ರೀಮಂತರಾಗಿದ್ದೇವೆ. ಅಧಿಕಾರ ಇದೆ ಎಂದು ಅಹಂಕಾರ ಪಟ್ಟರೆ ಮುಂದೊಂದು ದಿನ ನಾಯಿಗೆ ಹೊಡೆದಂತೆ ಹೊಡೆಯುತ್ತಾರೆ. ಆದರೆ ಎಂ.ಚಂದ್ರಪ್ಪ ಗೆದ್ದಾಗ ಹೇಗೆ ನಮ್ಮ ಮಠಕ್ಕೆ ಬರುತ್ತಿದ್ದರೋ ಸೋತ ಮೇಲೂ ಅದೇ ರೀತಿ ಬರುತ್ತಿದ್ದರು. ಕ್ಷೇತ್ರದ ಜನರ ಬಗ್ಗೆ ಅಭಿಮಾನ, ಗುರುಗಳ ಬಗ್ಗೆ ಅವರಲ್ಲಿರುವ ಗೌರವದ ಕಾರಣ ಪದೇ ಪದೇ ಚುನಾವಣೆಯಲ್ಲಿ ಗೆದ್ದು ಬರುತ್ತಿದ್ದಾರೆ. ಈ ಬಾರಿ ಚುನಾವಣೆಯಲ್ಲಿ ಪ್ರಭಾವಿಗಳು ಕರ್ನಾಟಕದಲ್ಲಿ ಸೋತಿದ್ದಾರೆ. ಎಂ.ಚಂದ್ರಪ್ಪ ಮಾತ್ರ ಸೋಲಲಿಲ್ಲ. ಅದಕ್ಕೆ ಅವರು ಗಳಿಸಿರುವ ಜನಪ್ರಿಯತೆ ಸಾಕ್ಷಿ ಎಂದರು.

ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ಮಾತನಾಡಿ ಅಹಂಕಾರ ಯಾರನ್ನು ಎತ್ತರಕ್ಕೆ ಬೆಳೆಸುವುದಿಲ್ಲ ಶಾಸಕ ಡಾ.ಎಂ.ಚಂದ್ರಪ್ಪನವರಲ್ಲಿ ವಿನಯತೆ ಇರುವುದರಿಂದಲೆ ಅವರನ್ನು ಗೌರವ ಡಾಕ್ಟರೇಟ್ ಪದವಿ ಹುಡುಕಿಕೊಂಡು ಬಂದಿದೆ. ಒಂದು ಕಾಲದಲ್ಲಿ ಟೀ.ಮಾರುವ ವ್ಯಕ್ತಿ ಈಗ ದೇಶದ ಪ್ರಧಾನಿಯಾಗಿದ್ದಾರೆಂದರೆ ಸುಲಭದ ಮಾತಲ್ಲ. ಚಂದ್ರಪ್ಪನವರ ಆಡಳಿತ ಅಚ್ಚುಕಟ್ಟಾಗಿದೆ. ಸೇವಕನ ನೀಯತ್ತು ಮಾಲೀಕನ ಸಂಪತ್ತು ಎನ್ನುವಂತಿದೆ. ವಿದ್ಯಾಕ್ಷೇತ್ರ ನಾಶವಿಲ್ಲದ್ದು, ಶಾಶ್ವತವಾಗಿರುತ್ತದೆ ಎಂದರು.



ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಮಾತನಾಡಿ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪನವರು ಸೂರ್ಯ ಚಂದ್ರ ಇರುವ ತನಕ ಅಜರಾಮರವಾಗಿರುವಂತಕೆಲಸಮಾಡಿದ್ದಾರೆ. ಯಾವ ಗ್ರಾಮಕ್ಕೆ ಏನು ಬೇಕು. ಕ್ಷೇತ್ರದಲ್ಲಿ ಯಾವ ಅಭಿವೃದ್ಧಿ ಕೈಗೊಂಡರೆ ಒಳ್ಳೆಯದಾಗುತ್ತದೆ ಎನ್ನುವುದನ್ನು ತಿಳಿದುಕೊಂಡು ಅನೇಕ ಜನಪರ ಕಾರ್ಯಗಳನ್ನು ಕೈಗೊಂಡಿದ್ದಾರೆ. ಜನರ ನಾಡಿ ಮಿಡಿತ ಬಲ್ಲವರಿಂದ ಮಾತ್ರ ಏನಾದರೂ ಸಾಧಿಸಬಹುದು. ಡಾಕ್ಟ□□ಗಳಿಗೆ ಮಾತ್ರ ಜನರ ನಾಡಿಮಿಡಿತ ಗೊತ್ತು. ಅದೇ ರೀತಿ ಶಾಸಕ ಎಂ.ಚಂದ್ರಪ್ಪನವರಿಗೆ ಕ್ಷೇತ್ರದ ಜನರ ನಾಡಿಮಿಡಿತ ಗೊತ್ತಿರುವುದರಿಂದ ಗೌರವ ಡಾಕ್ಟರೇಟ್ ಸಿಕ್ಕಿದೆ ಎಂದು ಹೇಳಿದರು.

ಗೌರವ ಸಮರ್ಪಣೆ ಸ್ವೀಕರಿಸಿ ಮಾತನಾಡಿದ ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ಮಾತು ಸಾಧನೆಯಾಗಬಾರದು. ಸಾಧನೆ ಮಾತಾಗಬೇಕೆಂದು ಸಿರಿಗೆರೆ ಹಾಗೂ ಸಾಣೆಹಳ್ಳಿಯ ಇಬ್ಬರು ಶ್ರೀಗಳು ನನಗೆ ಯಾವಾಗಲು ಹೇಳುತ್ತಿರುತ್ತಾರೆ. ಅದೇ ಪ್ರಕಾರ ನಾನು ಕ್ಷೇತ್ರದಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡಿಕೊಂಡು ಬರುತ್ತಿರುವ ಕಾರಣಕ್ಕಾಗಿ ಈ ಬಾರಿಯ ಚುನಾವಣೆಯಲ್ಲಿ ಜನ ಮತ್ತೆ ನನ್ನನ್ನು ಗೆಲ್ಲಿಸಿದ್ದಾರೆ. ರಾಜಕಾರಣಿಗೆ ಎತ್ತರಕ್ಕೆ ಹೋಗುವ ಅವಕಾಶವಿದೆ. ಅದೇ ರೀತಿ ಒಂದು ಪಕ್ಷಿ ಎಷ್ಟು ಎತ್ತರಕ್ಕೆ ಬೇಕಾದರೂ ಹಾರಬಹುದು. ಕೊನೆಗೆ ಆಹಾರಕ್ಕಾಗಿ ಕೆಳಗೆ ಇಳಿಯಲೇಬೇಕು. ನಾನು ಕೂಡ ರಾಜಕಾರಣದಲ್ಲಿ ಉತ್ತುಂಗಕ್ಕೆ ಹೋಗಿದ್ದರೂ ಅಂತಿಮವಾಗಿ ಸಾರ್ವಜನಿಕರ ಬಳಿ ಬರಲೇಬೇಕು. ಪರಮ ಪೂಜ್ಯರ ಮಾತಿನಿಂದ ಪ್ರೇರೇಪಣೆ ಪಡೆದು ಜನ ಸೇವೆ ಮಾಡುತ್ತಿದ್ದೇನೆ. ಮಸಿಯಪ್ಪ ಹಾಗೂ ಹೆಚ್. ಏಕಾಂತಯ್ಯನವರು ನನ್ನನ್ನು ರಾಜಕೀಯದಲ್ಲಿ ಬೆಳೆಸಿದವರು ಎಂದು ನೆನಪಿಸಿಕೊಂಡರು.

ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪು ಚುಕ್ಕೆ ಇಲ್ಲದಂತೆ ಕಳಂಕರಹಿತವಾಗಿ ಕೆಲಸ ಮಾಡುತ್ತಿದ್ದೇನೆ. ಜೀವನದಲ್ಲಿ ಪ್ರತಿಯೊಬ್ಬರಿಗೂ ಅವಕಾಶ ಸಿಕ್ಕೆ ಸಿಗುತ್ತದೆ. ಅಧಿಕಾರ ಶಾಶ್ವತವಲ್ಲ. ಸಿಕ್ಕ ಅವಕಾಶವನ್ನು ಸಾರ್ವಜನಿಕರಿಗೆ ಧಾರೆ ಎರೆಯಬೇಕು. ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಬೇಕು. ದೊಡ್ಡ ಶಿಕ್ಷಣ ಸಂಸ್ಥೆ ತೆರೆಯಲು ನನ್ನ ಧರ್ಮಪತ್ನಿ ಕಾರಣ. ಯಾವುದೇ ಫಲಾಪೇಕ್ಷೆಯಿಲ್ಲದೆ ಹೊಳಲ್ಕೆರೆ ಕ್ಷೇತ್ರದ ಜನ ಸೇವೆ ಮಾಡಿಕೊಂಡು ಬರುತ್ತಿರುವುದರಿಂದ ಕುವೆಂಪು ವಿಶ್ವವಿದ್ಯಾನಿಲಯ ಗೌರವ ಡಾಕ್ಟರೇಟ್ ನೀಡಿದೆ. ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಸಿಬ್ಬಂದಿಯನ್ನು ಕುಟುಂಬದ ಸದಸ್ಯರೆಂದು ಭಾವಿಸಿದ್ದೇನೆ. ಸಂಸ್ಥೆ ಈ ಮಟ್ಟಕ್ಕೆ ಬೆಳೆಯಲು ನೌಕರರ ಪರಿಶ್ರಮವಿದೆ ಎಂದು ಸ್ಮರಿಸಿದರು.

ಮಾಜಿಸಚಿವವೆಂಕಟರಮಣಪ್ಪಮಾತನಾಡಿ ಶಾಸಕ ಡಾ.ಎಂ.ಚಂದ್ರಪ್ಪನವರು ಜನ ಸೇವೆ ಮಾಡಿಕೊಂಡು ಬರುತ್ತಿರುವುದರಿಂದ ಗೌರವ ಡಾಕ್ಟರೇಟ್ ಸಿಕ್ಕಿದೆ. ದೊಡ್ಡ ವಿದ್ಯಾಸಂಸ್ಥೆ ಕಟ್ಟಿ ಶಿಕ್ಷಣಕ್ಕೆ ಒತ್ತು ಕೊಟ್ಟಿದ್ದಾರೆ. ಡಾಕ್ಟರೇಟ್ ಪದವಿ ಸಿಕ್ಕಿರುವುದರ ಹಿಂದೆ ಸಾಧನೆಯಿದೆ ಎಂದು ಹೇಳಿದರು.ನಗರಸಭೆ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ, ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ನಿವೃತ್ತ ಪ್ರಾಂಶುಪಾಲರಾದ ರುದ್ರಮುನಿ ಇವರುಗಳು ಮಾತನಾಡಿದರು.

ಉಡುಪಿ ಹೋಟೆಲ್ ಉದ್ಯಮಿ ಕೃಷ್ಣರಾಜಭಟ್, ನಿವೃತ್ತ ಪ್ರಾಂಶುಪಾಲರಾದ ಪದ್ಮಾವತಿಪಾಲಯ್ಯ,ದೇವರಾಜ್‌ಅರಸ್ ಶಿಕ್ಷಣ ಸಂಸ್ಥೆಯ ಸಿ.ಇ.ಓ. ಎಂ.ಸಿ.ರಘುಚಂದನ್, ಯಶಸ್ವಿನಿ ಕಿರಣ್, ಐ.ಜಿ.ಚಂದ್ರಶೇಖರಯ್ಯ ವೇದಿಕೆಯಲ್ಲಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T